ಬಳ್ಳಾರಿ । ವಿಜಯನಗರ । ಕೊಪ್ಪಳ । ಬೆಂಗಳೂರು । ದಾವಣಗೆರೆ । ಹುಬ್ಬಳ್ಳಿ
ಧಾರವಾಡ । ಹಾವೇರಿ । ಗದಗ । ರಾಯಚೂರು । ವಿಜಯನಗರ । ತುಮಕೂರು

ಅನಂತ ಜನಶಕ್ತಿ

ANANTA JANASHAKTHI — KANNADA DAILY NEWS PAPER

ಸಂಪಾದಕ: ಎಸ್.ವೆಂಕಟೇಸುಲು — ಬಳ್ಳಾರಿ ಜಿಲ್ಲೆಯಿಂದ ಪ್ರಕಟಿತ ಕನ್ನಡ ದೈನಿಕ — EDITOR : S VENKATESULU

ಸಂಪುಟ : 01 ಸಂಚಿಕೆ : 110 ರಿ.ನಂ : ಕೆಎನ್ಎಎನ್ / 26 / ಎ5487 ಬಳ್ಳಾರಿ ಶನಿವಾರ ದಿನಾಂಕ : 14-11-2026 ಪುಟ : 04 ಬೆಲೆ : 2-00

ಅಸ್ಸಾಂನಲ್ಲಿ ಘೋರ ದುರಂತ:
ವಿದ್ಯಾರ್ಥಿಗಳು ಪ್ರಯಾಣಿಸುತ್ತಿದ್ದ ಮಿನಿ ಬಸ್‌ಗೆ ಟ್ರಕ್ ಡಿಕ್ಕಿ, 23 ಸಾವು



ರಂಗಜಾನ್ (ಅಸ್ಸಾಂ): ಅಸ್ಸಾಂನ ಗೋಲಾಘಾಟ್ ಜಿಲ್ಲೆಯ ಕಾಜಿರಂಗ ರಾಷ್ಟ್ರೀಯ ಉದ್ಯಾನವನದ ಸಮೀಪವಿರುವ ರಂಗಜಾನ್ ಎಂಬಲ್ಲಿ ಇಂದು ಮಧ್ಯಾಹ್ನ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ 23 ಮಂದಿ ಸಾವನ್ನಪ್ಪಿದ್ದಾರೆ. ಪ್ರಯಾಣಿಕರನ್ನು ಕರೆದೊಯ್ಯುತ್ತಿದ್ದ ಟೆಂಪೋ ಟ್ರಾವೆಲರ್ (ಮಿನಿ ಬಸ್) ಮತ್ತು ಕಂಟೈನರ್ ಟ್ರಕ್ ನಡುವೆ ಮುಖಾಮುಖಿ ಡಿಕ್ಕಿ ಸಂಭವಿಸಿದ ಪರಿಣಾಮ ಈ ದುರ್ಘಟನೆ ನಡೆದಿದೆ.

ಗೋಲಾಘಾಟ್ ಜಿಲ್ಲೆಯ ಕಾಜಿರಂಗದ ಕೊಹೊರಾ ವ್ಯಾಪ್ತಿಯ ಹಾಥಿಕುಲಿ ಟೀ ಎಸ್ಟೇಟ್ ಸಮೀಪದ ರಂಗಜಾನ್‌ನಲ್ಲಿ ರಾಷ್ಟ್ರೀಯ ಹೆದ್ದಾರಿ (NH-715) ಮೇಲೆ ಈ ಅಪಘಾತ ಸಂಭವಿಸಿದೆ. ಬೊಕಾಖಾಟ್‌ನಿಂದ ನಾಗಾಂವ್ ಕಡೆಗೆ ಚಲಿಸುತ್ತಿದ್ದ ಪ್ರಯಾಣಿಕರ ಮಿನಿ ಬಸ್, ಗುವಾಹಟಿ ಕಡೆಯಿಂದ ಬರುತ್ತಿದ್ದ ಕಂಟೈನರ್ ಟ್ರಕ್‌ಗೆ

3ನೇ ಪುಟಕ್ಕೆ....

ಆಭರಣ ಪ್ರಿಯರಿಗೆ ಗುಡ್ ನ್ಯೂಸ್: ಚಿನ್ನದ ಬೆಲೆಯಲ್ಲಿ ಭಾರೀ ಕುಸಿತ!



ನವದೆಹಲಿ : ದೇಶಾದ್ಯಂತ ಚಿನ್ನದ ಬೆಲೆ ಇಳಿಕೆ ಮುಂದುವರೆದಿದೆ. ನವೆಂಬರ್ 13ರ ಬೆಳಿಗ್ಗೆ ದೆಹಲಿಯಲ್ಲಿ 24 ಕ್ಯಾರೆಟ್ 10 ಗ್ರಾಂ ಚಿನ್ನದ ಬೆಲೆ 1,39,940 ಕ್ಕೆ ದಾಖಲಾಗಿದ್ದರೆ, ಮುಂಬೈನಲ್ಲಿ 1,39,790 ರೂಪಾಯಿ ಇದ್ದರೆ ಬೆಂಗಳೂರಿನಲ್ಲಿ 1,38,490 ರೂಪಾಯಿ ಇದೆ. ದೇಶಾದ್ಯಂತ ಇತರ ಪ್ರಮುಖ ನಗರಗಳಲ್ಲಿಯೂ ಚಿನ್ನದ ಬೆಲೆ ಇಳಿಕೆಯಾಗಿದೆ.

ಒಂದು ದಿನದ ಹಿಂದೆ, ದೆಹಲಿ ಬುಲಿಯನ್ ಮಾರುಕಟ್ಟೆಯಲ್ಲಿ ಶೇಕಡಾ 99.9 ರಷ್ಟು ಶುದ್ಧತೆಯ ಚಿನ್ನದ ಬೆಲೆ 2,200 ರಷ್ಟು ಕುಸಿದಿದೆ. ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿ ದುರ್ಬಲ ಬೇಡಿಕೆ ಮತ್ತು ಬೆಲೆ ಕುಸಿತವು ಚಿನ್ನದ ಬೆಲೆ ಇಳಿಕೆಗೆ ಪ್ರಮುಖ ಕಾರಣವೆಂದು ನಂಬಲಾಗಿದೆ. ಏತನ್ಮಧ್ಯೆ, ಬೆಳ್ಳಿ ಬೆಲೆಗಳು ಪ್ರತಿ ಕಿಲೋಗ್ರಾಂಗೆ 1,99,900ಕ್ಕೆ ಇಳಿದಿವೆ. ಬೆಂಗಳೂರಿನಲ್ಲಿ 24 ಕ್ಯಾರೆಟ್ ನ 10 ಗ್ರಾಂ ಚಿನ್ನದ ಬೆಲೆಯಲ್ಲಿ ಕಳೆದ ನಾಲ್ಕು ದಿನಗಳಿಂದ ಒಟ್ಟು

3ನೇ ಪುಟಕ್ಕೆ...

ದಾಖಲೆ ಬರೆದ ಹಾಸನಾಂಬ ದರ್ಶನೋತ್ಸವ: 30 ಲಕ್ಷಕ್ಕೂ ಹೆಚ್ಚು ಭಕ್ತರಿಂದ ದರ್ಶನ; 29 ಕೋಟಿ ಆದಾಯ ಸಂಗ್ರಹ!



ಹಾಸನ: 14 ದಿನಗಳ ಕಾಲ ನಡೆದ ಪ್ರಸಿದ್ಧ ಹಾಸನಾಂಬೆ ದೇವಿ ದರ್ಶನೋತ್ಸವ ಈ ಬಾರಿ ಹೊಸ ದಾಖಲೆ ಬರೆದಿದೆ. ಒಟ್ಟು 30,06,000 ಭಕ್ತರು ಈ ಬಾರಿ ದೇವಿಯ ದರ್ಶನ ಪಡೆದಿದ್ದು, ಎಲ್ಲಾ ಮೂಲಗಳಿಂದ ಒಟ್ಟು 29,55,27,852 ರೂ. ಆದಾಯ ಸಂಗ್ರಹವಾಗಿದೆ ಎಂದು ಹಾಸನಾಂಬ ದೇವಾಲಯದ ಆಡಳಿತಾಧಿಕಾರಿ ಹಾಗೂ ಉಪವಿಭಾಗಾಧಿಕಾರಿ ಜಗದೀಶ್ ಗಂಗಣ್ಣನವರ್ ತಿಳಿಸಿದ್ದಾರೆ.

ಕಳೆದ ವರ್ಷ 13 ದಿನಗಳಲ್ಲಿ 25 ಲಕ್ಷ ಭಕ್ತರು ದರ್ಶನ ಪಡೆದಿದ್ದು, 1,000, 300 ರೂ. ವಿಶೇಷ ದರ್ಶನ ಟಿಕೆಟ್, ಲಾಡು ಪ್ರಸಾದ ಹಾಗೂ ಹುಂಡಿ ಕಾಣಿಕೆ ಸೇರಿ 25.59 ಕೋಟಿ ರೂ. ಸಂಗ್ರಹವಾಗಿತ್ತು. ಈ ಬಾರಿ ಅಕ್ಟೋಬರ್ 29 ರಂದು ಹಾಸನಾಂಬ ದೇವಾಲಯದ ಗರ್ಭಗುಡಿ ಬಾಗಿಲು ತೆರೆದಿದ್ದು, ಅಂದು ಸಾರ್ವಜನಿಕರಿಗೆ ದರ್ಶನ ಇಲ್ಲದಿದ್ದರೂ,

3ನೇ ಪುಟಕ್ಕೆ...

ಭಾರತದಲ್ಲಿ ವಿಜ್ಞಾನ ಮತ್ತು ಆಧ್ಯಾತ್ಮಿಕತೆ ಜೊತೆಯಾಗಿ ಸಾಗುತ್ತವೆ: ಕಾಸ್ಮೋಸ್- ಮೈಸೂರು ತಾರಾಲಯ ಉದ್ಘಾಟಿಸಿದ ಪ್ರಧಾನಿ ಮೋದಿ!



ಮೈಸೂರು: ಭಾರತದಲ್ಲಿ ವಿಜ್ಞಾನ ಮತ್ತು ಆಧ್ಯಾತ್ಮಿಕತೆ ಒಂದಕ್ಕೊಂದು ಪೂರಕವಾಗಿದ್ದು, ಒಟ್ಟಿಗೆ ಸಾಗುತ್ತವೆ ಎಂದು ಪ್ರಧಾನಿ ನರೇಂದ್ರ ಮೋದಿ ಶುಕ್ರವಾರ ಹೇಳಿದ್ದಾರೆ. ಭಾರತದ ಯುವಜನರು ಖಗೋಳ ಭೌತಶಾಸ್ತ್ರ, ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರಗಳಲ್ಲಿ ಭಾರಿ ಪ್ರಗತಿ ಸಾಧಿಸುತ್ತಿದ್ದಾರೆ ಎಂದು ಅವರು ತಿಳಿಸಿದ್ದಾರೆ.

ಮೈಸೂರು ವಿಶ್ವವಿದ್ಯಾನಿಲಯವನ್ನು ಸ್ಥಾಪಿಸುವ ಮೂಲಕ ಹಾಗೂ 'ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಸೈನ್ಸ್' ಗೆ ಭೂಮಿಯನ್ನು ದಾನ ಮಾಡುವ ಮೂಲಕ ದೇಶದಲ್ಲಿ ವಿಜ್ಞಾನವನ್ನು ಉತ್ತೇಜಿಸುವಲ್ಲಿ ಮೈಸೂರು ರಾಜಮನೆತನದವರು ಮಾಡಿದ ಪ್ರಯತ್ನಗಳನ್ನು ಪ್ರಧಾನಿ ಮೋದಿ ಶ್ಲಾಘಿಸಿದರು.

ಚಾಮುಂಡಿ ಬೆಟ್ಟದ ತಪ್ಪಲಿನಲ್ಲಿರುವ ಮೈಸೂರು ವಿಶ್ವವಿದ್ಯಾನಿಲಯದ ಆವರಣದಲ್ಲಿ ನಿರ್ಮಿಸಲಾದ, ಅತ್ಯಾಧುನಿಕ ತಂತ್ರಜ್ಞಾನವುಳ್ಳ 'ಎಲ್‌ಇಡಿ ಡೋಮ್' ತಾರಾಲಯವನ್ನು ಉದ್ಘಾಟಿಸಿದ ನಂತರ

2ನೇ ಪುಟಕ್ಕೆ...

ಪ್ರಧಾನಿ ಮೋದಿ ಜೊತೆ ಬಹಿರಂಗ ಚರ್ಚೆಗೆ ರಾಹುಲ್ ಗಾಂಧಿ ಸವಾಲು



ನವದೆಹಲಿ: ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ಮುಕ್ತ ವೇದಿಕೆಯಲ್ಲಿ ನೇರ ಚರ್ಚೆ ನಡೆಸಲು ಸಿದ್ಧವಿರುವುದಾಗಿ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಬಹಿರಂಗ ಸವಾಲು ಹಾಕಿದ್ದಾರೆ. ತಮ್ಮೊಂದಿಗೆ ಚರ್ಚೆಗೆ ಬಂದರೆ ಪ್ರಧಾನಿ ಮೋದಿ ಅವರ ರಾಜಕೀಯ ಜೀವನವೇ ಅಂತ್ಯವಾಗಲಿದೆ ಎಂದು ರಾಹುಲ್ ಗಾಂಧಿ ಹೇಳಿರುವುದು ರಾಜಕೀಯ ವಲಯದಲ್ಲಿ ತೀವ್ರ ಚರ್ಚೆಗೆ ಕಾರಣವಾಗಿದೆ.

ಕಳೆದ 12 ದಿನಗಳಲ್ಲಿ ಏಳನೇ ಬಾರಿಗೆ ಪ್ರಧಾನಿ ಮೋದಿಗೆ ಚರ್ಚೆಯ ಸವಾಲು ಹಾಕಿರುವ ರಾಹುಲ್ ಗಾಂಧಿ, ಸಂಸತ್ತಿನಲ್ಲಿ ರೈತರ ಸಮಸ್ಯೆಗಳು, ಮತಗಳ್ಳತನ, ಎಸ್‌ಐಆರ್ ಪ್ರಕ್ರಿಯೆ, ಚೀನಾ ವಿಚಾರ ಹಾಗೂ ಎಪ್ಸ್ಟೀನ್ ಪ್ರಕರಣ ಸೇರಿದಂತೆ

2ನೇ ಪುಟಕ್ಕೆ...

ಬಳ್ಳಾರಿ ಮಹಾನಗರ ಪಾಲಿಕೆ ಮೇಯರ್ ಚುನಾವಣೆ ಮುಂದೂಡಿಕೆ



ಬಳ್ಳಾರಿ: ಬಳ್ಳಾರಿ ಮಹಾನಗರ ಪಾಲಿಕೆಯ 25ನೇ ಅವಧಿಯ ಮೇಯರ್, ಉಪಮೇಯರ್ ಹಾಗೂ ಸ್ಥಾಯಿ ಸಮಿತಿ ಸದಸ್ಯರ ಆಯ್ಕೆಗೆ ಇಂದು (ನ.13) ನಡೆಯಬೇಕಿದ್ದ ಚುನಾವಣೆಯನ್ನು ದಿಢೀರ್ ಮುಂದೂಡಲಾಗಿದೆ.

2ನೇ ಪುಟಕ್ಕೆ....

ಜಿಎಸ್‌ಟಿ ಪಾಲು, ಬರ ಪರಿಹಾರ, ಕಬ್ಬು ಬೆಳೆಗಾರರ ಬೇಡಿಕೆ ವಿಷಯ ಪ್ರಸ್ತಾಪಿಸಿದ ಸಿಎಂ



ಬೆಂಗಳೂರು : ರಾಜ್ಯದಾದ್ಯಂತ ತೀವ್ರ ಬರ ಪರಿಸ್ಥಿತಿ ಮತ್ತು ಬೆಳೆ ನಷ್ಟವನ್ನು ಎದುರಿಸಲು ಕರ್ನಾಟಕಕ್ಕೆ ಆರ್ಥಿಕ ನೆರವು ಒದಗಿಸುವಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಮನವಿ ಮಾಡಿದರು.

ಇಂದು ಬೆಂಗಳೂರಿನಲ್ಲಿ ಪಿಂಕ್ ಲೈನ್ ಮೆಟ್ರೊ ಉದ್ಘಾಟನೆ ಕಾರ್ಯಕ್ರಮದಲ್ಲಿ ವೇದಿಕೆಯಲ್ಲಿ ಪ್ರಧಾನ ಮಂತ್ರಿಗಳ ಎದುರು ಸಿಎಂ ಡಿ ಕೆ ಶಿವಕುಮಾರ್ ಈ ಮನವಿ ಮಾಡಿದ್ದಾರೆ. ಕಳೆದ 70 ವರ್ಷಗಳಲ್ಲೇ ಕರ್ನಾಟಕ ಈ ಬಾರಿ ಎರಡನೇ ಅತಿ ಕಡಿಮೆ ಮಳೆಯನ್ನು ದಾಖಲಿಸಿದೆ. ರಾಜ್ಯದ 240 ತಾಲೂಕುಗಳ ಪೈಕಿ 246 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿದೆ. ಸುಮಾರು 85 ಲಕ್ಷ ಹೆಕ್ಟೇರ್ ಪ್ರದೇಶದ ಬೆಳೆ ಹಾನಿಗೀಡಾಗಿದೆ. ರಾಷ್ಟ್ರೀಯ ವಿಪತ್ತು ಪ್ರತಿಕ್ರಿಯೆ ನಿಧಿ (ಎನ್‌ಡಿಆರ್‌ಎಫ್) ಅಡಿಯಲ್ಲಿ 22,000 ಕೋಟಿ ನೆರವು ನೀಡುವಂತೆ ಮನವಿ ಮಾಡುತ್ತೇನೆ ಎಂದು ಹೇಳಿದರು.

2ನೇ ಪುಟಕ್ಕೆ...

ಕುಡಿಯುವ ನೀರು ಮತ್ತು ವಿದ್ಯುತ್ ಸಮಸ್ಯೆಗಳ ಪರಿಹಾರಕ್ಕೆ ಅಧಿಕಾರಿಗಳಿಗೆ ಶಾಸಕರ ಸೂಚನೆ



ಕೂಡ್ಲಿಗಿ: ಕ್ಷೇತ್ರದ ಸಾರ್ವಜನಿಕರಿಗೆ ಕುಡಿಯುವ ನೀರು ಹಾಗೂ ವಿದ್ಯುತ್ ಪೂರೈಕೆಯಲ್ಲಿ ಯಾವುದೇ ರೀತಿಯ ತೊಂದರೆಯಾಗದಂತೆ ಅಧಿಕಾರಿಗಳು ಎಚ್ಚರಿಕೆಯಿಂದ ಕಾರ್ಯನಿರ್ವಹಿಸಬೇಕು. ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾದಲ್ಲಿ ತಕ್ಷಣ ಸ್ಪಂದಿಸಿ, ವಿಳಂಬವಿಲ್ಲದೆ ಸೂಕ್ತ ಪರಿಹಾರ ಕಲ್ಪಿಸಬೇಕು ಎಂದು ಕೂಡ್ಲಿಗಿ ಶಾಸಕ ಡಾ. ಶ್ರೀನಿವಾಸ್ ಅವರು ಜೆಸ್ಕಾಂ ಹಾಗೂ ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆಯ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಪಟ್ಟಣದ ಪ್ರವಾಸಿ ಮಂದಿರದಲ್ಲಿ ಜೆಸ್ಕಾಂ ಮತ್ತು ಗ್ರಾಮೀಣ

2ನೇ ಪುಟಕ್ಕೆ...

ಸ್ಥಳೀಯ ಜವಳಿ ಉತ್ಪನ್ನಗಳನ್ನು ಅಂತರರಾಷ್ಟ್ರೀಯ ಮಾರುಕಟ್ಟೆಗೆ ರಫ್ತು ಮಾಡಿ : ಮಹಾಂತೇಶ್ ಕಂಬಿಮಠ
'ರಫ್ತು ಪ್ರೋತ್ಸಾಹನ ಕಾರ್ಯಾಗಾರ'



ವಿಜಯನಗರ : ಜವಳಿ ಮತ್ತು ಕೈಮಗ್ಗ ಕ್ಷೇತ್ರದ ಉದ್ಯಮದಾರರು ಸ್ಥಳೀಯವಾಗಿ ಉತ್ಪಾದಿಸುವ ಗುಣಮಟ್ಟದ ಉತ್ಪನ್ನಗಳನ್ನು ಅಂತರರಾಷ್ಟ್ರೀಯ ಮಾರುಕಟ್ಟೆಗಳಿಗೆ ರಫ್ತು ಮಾಡುವ ಮೂಲಕ ಉದ್ಯಮದ ಬೆಳವಣಿಗೆ ಹಾಗೂ ದೇಶದ ಆರ್ಥಿಕ ಅಭಿವೃದ್ಧಿಗೆ ಹೆಚ್ಚಿನ ಕೊಡುಗೆ ನೀಡಬೇಕು ಎಂದು ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪನಿರ್ದೇಶಕ ಮಹಾಂತೇಶ್ ಕೆ.ಜಿ. ಕಂಬಿಮಠ ಕರೆ ನೀಡಿದರು.

2ನೇ ಪುಟಕ್ಕೆ...

ಯತ್ನಾಳ್ ವಿರುದ್ಧದ ಪ್ರಕರಣ ರದ್ದತಿಗೆ ಹೈಕೋರ್ಟ್ ನಕಾರ



ಬೆಂಗಳೂರು: ಮಾಜಿ ಸಚಿವ ಹಾಗೂ ಶಾಸಕ ಶಿವಾನಂದ ಎಸ್.ಪಾಟೀಲ ಅವರ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿದ್ದ ಆರೋಪಕ್ಕೆ ಸಂಬಂಧಿಸಿದಂತೆ ವಿಜಯಪುರ ನಗರ ಶಾಸಕ ಬಸನಗೌಡ ಪಾಟೀಲ ಯತ್ನಾಳ್ ವಿರುದ್ಧದ ಮಾನನಷ್ಟ ಮೊಕದ್ದಮೆಯ ವಿಚಾರಣೆ ರದ್ದುಪಡಿಸಲು ಹೈಕೋರ್ಟ್ ನಿರಾಕರಿಸಿದೆ.

ಈ ಸಂಬಂಧ ಯತ್ನಾಳ್ ಅವರು ಸಲ್ಲಿಸಿದ್ದ ಕ್ರಿಮಿನಲ್ ಅರ್ಜಿಯನ್ನು ನ್ಯಾಯಮೂರ್ತಿ ಅನಂತ ರಾಮನಾಥ ಹೆಗಡೆ ಅವರಿದ್ದ ಏಕಸದಸ್ಯ ನ್ಯಾಯಪೀಠ ವಜಾಗೊಳಿಸಿ ಆದೇಶಿಸಿದೆ.

'ಯತ್ನಾಳ್ ಅವರ ಹೇಳಿಕೆ ಮೇಲ್ನೋಟಕ್ಕೆ ದೂರುದಾರ ಶಿವಾನಂದ ಪಾಟೀಲರ ಚಾರಿತ್ರ್ಯ ಮತ್ತು ಘನತೆಗೆ ಧಕ್ಕೆ ತರುವಂತಿವೆ. ಅಲ್ಲದೆ, ವಿಚಾರಣಾ ನ್ಯಾಯಾಲಯ ಇಬ್ಬರು ಸಾಕ್ಷಿಗಳ ಹೇಳಿಕೆ ಆಧಾರದಲ್ಲಿ ಆಪಾದನೆಯನ್ನು ವಿಚಾರಣೆಗೆ ಪರಿಗಣಿಸಿರುವುದು ದೋಷಪೂರಿತ ಎಂದು ಹೇಳಲಾಗದು.

2ನೇ ಪುಟಕ್ಕೆ...

ರಾಜ್ಯಕ್ಕೆ ಶೀಘ್ರದಲ್ಲೇ ಮೂರನೇ ಮುಖ್ಯಮಂತ್ರಿ: ಶ್ರೀರಾಮುಲು ಭವಿಷ್ಯ



ಗದಗ : ಕರ್ನಾಟಕ ರಾಜ್ಯ ರಾಜಕೀಯದಲ್ಲಿ ಮುಖ್ಯಮಂತ್ರಿ ಬದಲಾವಣೆಯ ಚರ್ಚೆ ಮತ್ತೆ ಮುನ್ನೆಲೆಗೆ ಬಂದಿದೆ. ರಾಜ್ಯದಲ್ಲಿ ಶೀಘ್ರದಲ್ಲೇ ಮೂರನೇ ಮುಖ್ಯಮಂತ್ರಿ ಅಧಿಕಾರ ವಹಿಸಿಕೊಳ್ಳಲಿದ್ದಾರೆ ಎಂದು ಮಾಜಿ ಸಚಿವ ಹಾಗೂ ಬಿಜೆಪಿ ನಾಯಕ ಬಿ. ಶ್ರೀರಾಮುಲು ಭವಿಷ್ಯ ನುಡಿದಿದ್ದಾರೆ. ಮುಂಬರುವ ಚಳಿಗಾಲದ ಅಧಿವೇಶನದ ಸಂದರ್ಭದಲ್ಲಿ ಕಾಂಗ್ರೆಸ್ ಶಾಸಕರ ಸಹಿ

2ನೇ ಪುಟಕ್ಕೆ...

ಭಾರತದಲ್ಲಿ ವಿಜ್ಞಾನ ಮತ್ತು ಆಧ್ಯಾತ್ಮಿಕತೆ ಜೊತೆಯಾಗಿ ಸಾಗುತ್ತವೆ: ಕಾಸ್ಮೋಸ್– ಮೈಸೂರು ತಾರಾಲಯ ಉದ್ಘಾಟಿಸಿದ ಪ್ರಧಾನಿ ಮೋದಿ!

1ನೇ ಪುಟದಿಂದ..

ಸಾರ್ವಜನಿಕರನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ಮೋದಿ,. ಭಾರತದಲ್ಲಿ ಆಧ್ಯಾತ್ಮಿಕತೆ ಮತ್ತು ವಿಜ್ಞಾನ ಜೊತೆಜೊತೆಯಾಗಿ ಸಾಗುತ್ತವೆ ಎಂದು ಹೇಳಿದರು.

"ಆಧುನಿಕ ಉಪಕರಣಗಳ ಕೊರತೆಯಿದ್ದರೂ, ನಮ್ಮ ಪೂರ್ವಜರು ವಿಶ್ವವನ್ನು ಮತ್ತು ಗ್ರಹಗಳ ಚಲನೆಯನ್ನು ಬಹಳ ಸೂಕ್ಷ್ಮವಾಗಿ ಅಧ್ಯಯನ ಮಾಡಿದ್ದರು. ನಮ್ಮ ಪ್ರಾಚೀನ ಖಗೋಳಶಾಸ್ತ್ರಜ್ಞರು ವಿಶ್ವವನ್ನು ಅಧ್ಯಯನ ಮಾಡಲು ಸಂಕೀರ್ಣ ಗಣಿತದ ಲೆಕ್ಕಾಚಾರಗಳನ್ನು ಕೈಗೊಂಡಿದ್ದರು" ಎಂದು ಅವರು ಸ್ಮರಿಸಿದರು.

ಚಂದ್ರಯಾನ–3 ರ ಮೂಲಕ ಚಂದ್ರನನ್ನು ತಲುಪಿದ ಆಯ್ದ ರಾಷ್ಟ್ರಗಳ ಸಾಲಿಗೆ ಭಾರತ ಸೇರ್ಪಡೆಗೊಂಡಿದ್ದನ್ನು ಹಾಗೂ ಚಂದ್ರನ ದಕ್ಷಿಣ ಧ್ರುವದಲ್ಲಿ ಇಳಿದ ಮೊದಲ ದೇಶವಾಗಿ ಹೊರಹೊಮ್ಮಿದ್ದನ್ನು ಅವರು ನೆನಪಿಸಿಕೊಂಡರು.

ಭಾರತವು ಬಾಹ್ಯಾಕಾಶದಲ್ಲಿ ಉಪಗ್ರಹಗಳನ್ನು ಜೋಡಿಸುವ ಮತ್ತು ಬೇರ್ಪಡಿಸುವ ಪ್ರಕ್ರಿಯೆಗಳನ್ನು ಯಶಸ್ವಿಯಾಗಿ ನಡೆಸಿದೆ ಎಂದು ಮೋದಿ ಹೇಳಿದರು. ಅಲ್ಲದೆ, ಕಳೆದ ವರ್ಷ ಶುಭಾಂಶು ಶುಕ್ಲಾ ಭಾರತೀಯರನ್ನು ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಕಳುಹಿಸಿದ್ದನ್ನೂ ಅವರು ಉಲ್ಲೇಖಿಸಿದರು.

ಭಾರತದ ಯುವಜನರು 'ಅಂತಾರಾಷ್ಟ್ರೀಯ ಖಗೋಳಶಾಸ್ತ್ರ ಮತ್ತು ಖಗೋಳ ಭೌತಶಾಸ್ತ್ರ ಒಲಿಂಪಿಯಾಡ್'ನಲ್ಲಿ ಉತ್ಸಾಹದಿಂದ ಭಾಗವಹಿಸಿ ಪದಕಗಳನ್ನು ಗೆದ್ದಿದ್ದಾರೆ ಎಂದು ಪ್ರಧಾನಿ ತಿಳಿಸಿದರು.

ಇನ್ನೂ ಸರ್ಕಾರದ ನೀತಿಯ ಬಗ್ಗೆ ಮಾತನಾಡಿದ ಅವರು, ಭಾರತವು ಬಾಹ್ಯಾಕಾಶ ವಲಯವನ್ನು ಖಾಸಗಿ ಸಂಸ್ಥೆಗಳಿಗೆ ಮುಕ್ತಗೊಳಿಸಿದ್ದು, ಅವರು ತಮ್ಮದೇ ಆದ ರಾಕೆಟ್‌ಗಳನ್ನು ಉಡಾವಣೆ ಮಾಡಲು ಅವಕಾಶ ಕಲ್ಪಿಸಲಾಗಿದೆ ಎಂದು ಹೇಳಿದರು.

ಭಾರತದ ಬಾಹ್ಯಾಕಾಶ ಕಾರ್ಯಾಚರಣೆಗಳು ಮಾನವಕುಲದ ಕಲ್ಯಾಣಕ್ಕಾಗಿ ಉದ್ದೇಶಿಸಲಾಗಿದೆ ಎಂದು ಹೇಳಿದ ಪ್ರಧಾನಿ, "ನಮ್ಮ ಉಪಗ್ರಹಗಳು ಮೀನುಗಾರರಿಗೆ ಸಹಾಯ ಮಾಡುತ್ತವೆ, ರೈಲುಗಳ ಸಂಚಾರವನ್ನು ನೈಜ ಸಮಯದಲ್ಲಿ ಪತ್ತೆಹಚ್ಚಲು ನೆರವಾಗುತ್ತವೆ ಮತ್ತು ಬೆಳೆ ವಿಮೆಗಾಗಿ ಉಪಗ್ರಹ ದತ್ತಾಂಶವನ್ನು ಬಳಸಲು ಸಹಕಾರಿಯಾಗಿವೆ" ಎಂದು ವಿವರಿಸಿದರು.

ಕುಡಿಯುವ ನೀರು ಮತ್ತು ವಿದ್ಯುತ್ ಸಮಸ್ಯೆಗಳ ಪರಿಹಾರಕ್ಕೆ ಅಧಿಕಾರಿಗಳಿಗೆ ಶಾಸಕರ ಸೂಚನೆ

1ನೇ ಪುಟದಿಂದ..

ಕುಡಿಯುವ ನೀರು ಸರಬರಾಜು ಇಲಾಖೆಯ ಅಧಿಕಾರಿಗಳೊಂದಿಗೆ ಆಯೋಜಿಸಿದ್ದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕ್ಷೇತ್ರದಲ್ಲಿ ತೀವ್ರ ಬರಗಾಲದ ಪರಿಸ್ಥಿತಿ ನಿರ್ಮಾಣವಾಗುತ್ತಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರಿಗೆ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಅಧಿಕಾರಿಗಳು ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು. ಗ್ರಾಮೀಣ ಭಾಗಗಳಲ್ಲಿ ನೀರಿನ ಅಭಾವ ಕಂಡುಬರುವ ಸಾಧ್ಯತೆ ಇರುವುದರಿಂದ ಈಗಿನಿಂದಲೇ ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು. ಯಾವ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗುವ ಸಾಧ್ಯತೆ ಇದೆ ಎಂಬುದನ್ನು ಗುರುತಿಸಿ, ಸಮಸ್ಯೆ ಉಲ್ಬಣಿಸುವ ಮೊದಲೇ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಶಾಸಕರು ತಿಳಿಸಿದರು.

ಗ್ರಾಮಗಳಲ್ಲಿ ಕೊಳವೆಬಾವಿಗಳು, ನೀರಿನ ಪೈಪ್‌ಲೈನ್‌ಗಳು ಹಾಗೂ ಕುಡಿಯುವ ನೀರಿನ ಪೂರೈಕೆ ವ್ಯವಸ್ಥೆಯನ್ನು ನಿರಂತರವಾಗಿ ಪರಿಶೀಲಿಸಬೇಕು. ನೀರಿನ ಮೂಲಗಳಲ್ಲಿ ಲಭ್ಯವಿರುವ ಪ್ರಮಾಣದ ಬಗ್ಗೆ ಮಾಹಿತಿ ಪಡೆದು, ಅಗತ್ಯವಿರುವ ಕಡೆ ಪರ್ಯಾಯ ವ್ಯವಸ್ಥೆ ಕಲ್ಪಿಸಬೇಕು. ಸಾರ್ವಜನಿಕರು ಕುಡಿಯುವ ನೀರಿಗಾಗಿ ಪರದಾಡುವ ಪರಿಸ್ಥಿತಿ ನಿರ್ಮಾಣವಾಗದಂತೆ ಅಧಿಕಾರಿಗಳು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕು. ವಿಶೇಷವಾಗಿ ಬೇಸಿಗೆಯ ದಿನಗಳಲ್ಲಿ ಜಾನುವಾರುಗಳಿಗೂ ಕುಡಿಯುವ ನೀರಿನ ಕೊರತೆಯಾಗದಂತೆ ಅಗತ್ಯ ವ್ಯವಸ್ಥೆ ಮಾಡಬೇಕು ಎಂದು ಸೂಚಿಸಿದರು. ಇದೇ ವೇಳೆ ವಿದ್ಯುತ್ ಇಲಾಖೆಯ ಕಾರ್ಯವೈಖರಿ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದ ಶಾಸಕರು, ಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ಹಾಳಾಗಿರುವ ಹಾಗೂ ಮುರಿದುಬಿದ್ದಿರುವ ವಿದ್ಯುತ್ ಕಂಬಗಳನ್ನು ತಕ್ಷಣ ಬದಲಾಯಿಸುವಂತೆ ಸೂಚಿಸಿದರು. ಅಪಾಯಕಾರಿ ಸ್ಥಿತಿಯಲ್ಲಿರುವ ವಿದ್ಯುತ್ ಕಂಬಗಳು ಮತ್ತು ವಿದ್ಯುತ್ ತಂತಿಗಳಿಂದ ಸಾರ್ವಜನಿಕರ ಜೀವಕ್ಕೆ ಅಪಾಯ ಉಂಟಾಗುವ ಸಾಧ್ಯತೆ ಇರುವುದರಿಂದ ಇಂತಹ ಸಮಸ್ಯೆಗಳನ್ನು ನಿರ್ಲಕ್ಷಿಸಬಾರದು. ದುರಸ್ತಿಗೆ ಬಾಕಿ ಇರುವ ಕಂಬಗಳು ಹಾಗೂ ವಿದ್ಯುತ್ ಸಂಪರ್ಕ ವ್ಯವಸ್ಥೆಗಳನ್ನು ಆದ್ಯತೆಯ ಮೇರೆಗೆ ಸರಿಪಡಿಸಬೇಕು ಎಂದು ನಿರ್ದೇಶನ ನೀಡಿದರು. ಗ್ರಾಮೀಣ ಪ್ರದೇಶಗಳಲ್ಲಿ ನಿರಂತರ ವಿದ್ಯುತ್ ಪೂರೈಕೆಗೆ ಅಗತ್ಯ ಕ್ರಮ ಕೈಗೊಳ್ಳಬೇಕು. ಪದೇಪದೇ ವಿದ್ಯುತ್ ವ್ಯತ್ಯಯವಾಗುವ ಗ್ರಾಮಗಳನ್ನು ಗುರುತಿಸಿ, ಸಮಸ್ಯೆಯ ಮೂಲ ಕಾರಣವನ್ನು ಪತ್ತೆಹಚ್ಚಿ ಶಾಶ್ವತ ಪರಿಹಾರ ಒದಗಿಸಬೇಕು. ರೈತರು, ಸಾರ್ವಜನಿಕರು ಹಾಗೂ ಗ್ರಾಮೀಣ ಪ್ರದೇಶದ ಜನರು ವಿದ್ಯುತ್ ಸಮಸ್ಯೆಯಿಂದ ತೊಂದರೆ ಅನುಭವಿಸಿದಂತೆ ಸಂಬಂಧಪಟ್ಟ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು ಎಂದು ಹೇಳಿದರು.

ಎಸ್‌ಸಿಪಿ ಮತ್ತು ಟಿಎಸ್‌ಪಿ ಯೋಜನೆಗಳ ಅಡಿಯಲ್ಲಿ ಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ಕೈಗೊಳ್ಳಲಾಗಿರುವ ವಿದ್ಯುತ್ ಸಂಬಂಧಿತ ಕಾಮಗಾರಿಗಳ ಪ್ರಗತಿಯ ಬಗ್ಗೆಯೂ ಶಾಸಕರು ಮಾಹಿತಿ ಪಡೆದರು. ಈ ಯೋಜನೆಗಳಡಿ ಕೈಗೊಳ್ಳಬೇಕಿರುವ ಕಾಮಗಾರಿಗಳನ್ನು ವಿಳಂಬ ಮಾಡದೆ ಆದ್ಯತೆಯ ಮೇರೆಗೆ ಪೂರ್ಣಗೊಳಿಸಬೇಕು. ಯೋಜನೆಗಳ ಅನುಷ್ಠಾನದಲ್ಲಿ ಯಾವುದೇ ಲೋಪದೋಷಗಳು ಕಂಡುಬರದಂತೆ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಮೇಲ್ವಿಚಾರಣೆ ನಡೆಸಬೇಕು ಎಂದು ಮಾರ್ಗದರ್ಶನ ನೀಡಿದರು.

ಜನರ ಮೂಲಭೂತ ಅಗತ್ಯಗಳಾದ ಕುಡಿಯುವ ನೀರು ಮತ್ತು ವಿದ್ಯುತ್ ಪೂರೈಕೆಯಲ್ಲಿ ಯಾವುದೇ ಲೋಪವಾಗಬಾರದು. ಸಾರ್ವಜನಿಕರಿಂದ ಸಮಸ್ಯೆಗಳ ಕುರಿತು ದೂರುಗಳು ಬಂದಾಗ ಅವುಗಳನ್ನು ನಿರ್ಲಕ್ಷಿಸದೆ ತಕ್ಷಣ ಸ್ಪಂದಿಸಬೇಕು. ಸಮಸ್ಯೆಗಳ ಪರಿಹಾರಕ್ಕಾಗಿ ಸಾರ್ವಜನಿಕರು ಕಚೇರಿಯಿಂದ ಕಚೇರಿಗೆ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಬಾರದು. ಅಧಿಕಾರಿಗಳು ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸಿ, ಜನರಿಗೆ ಅಗತ್ಯ ಸೇವೆಗಳನ್ನು ಸಮರ್ಪಕವಾಗಿ ಒದಗಿಸಬೇಕು ಎಂದು ಶಾಸಕ ಡಾ. ಶ್ರೀನಿವಾಸ್ ಅವರು ತಿಳಿಸಿದರು.

ಕ್ಷೇತ್ರದ ಅಭಿವೃದ್ಧಿ ಹಾಗೂ ಜನರ ಮೂಲಭೂತ ಸೌಕರ್ಯಗಳ ಸುಧಾರಣೆಗೆ ಸರ್ಕಾರದ ವಿವಿಧ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವುದು ಅಧಿಕಾರಿಗಳ ಜವಾಬ್ದಾರಿಯಾಗಿದೆ. ಕುಡಿಯುವ ನೀರು ಮತ್ತು ವಿದ್ಯುತ್ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸುವ ಮೂಲಕ ಜನರ ವಿಶ್ವಾಸ ಉಳಿಸಿಕೊಳ್ಳಬೇಕು. ಮುಂದಿನ ದಿನಗಳಲ್ಲಿ ಯಾವುದೇ ಗ್ರಾಮದಿಂದ ನೀರು ಅಥವಾ ವಿದ್ಯುತ್ ಸಮಸ್ಯೆಯ ದೂರುಗಳು ಬಾರದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಭೆಯಲ್ಲಿ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ನರಸಪ್ಪ, ವಿದ್ಯುತ್ ಇಲಾಖೆಯ ಅಧಿಕಾರಿಗಳಾದ ವಿಕಾಂತ ರೆಡ್ಡಿ, ಸತೀಶ್, ನಾಗರಾಜ್, ವಿಷ್ಣು, ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆಯ ಅಧಿಕಾರಿ ಪ್ರಸನ್ನ, ಜೆಸ್ಕಾಂ ಇಲಾಖೆಯ ವಿವಿಧ ವಿಭಾಗಗಳ ಮುಖ್ಯಸ್ಥರು ಹಾಗೂ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಅನಂತ ಜನಶಕ್ತಿ ದಿನಪತ್ರಿಕೆಗೆ ಜಿಲ್ಲಾ ಹಾಗೂ ತಾಲೂಕು ವರದಿಗಾರರು ಬೇಕಾಗಿದ್ದಾರೆ ಸುದ್ದಿ ಮತ್ತು ಜಾಹೀರಾತು ನೀಡಲು ಕೂಡಲೇ ಸಂಪರ್ಕಿಸಿ

ರಾಜ್ಯಕ್ಕೆ ಶೀಘ್ರದಲ್ಲೇ ಮೂರನೇ ಮುಖ್ಯಮಂತ್ರಿ: ಶ್ರೀರಾಮುಲು ಭವಿಷ್ಯ

1ನೇ ಪುಟದಿಂದ..

ಸಂಗ್ರಹಿಸುವ ಪ್ರಕ್ರಿಯೆ ನಡೆಯಲಿದ್ದು, ಅದರ ನಂತರ ರಾಜ್ಯಕ್ಕೆ ಹೊಸ ಮುಖ್ಯಮಂತ್ರಿ ಆಯ್ಕೆಯಾಗುವ ಸಾಧ್ಯತೆಯಿದೆ ಎಂದು ಅವರು ಹೇಳಿರುವುದು ರಾಜಕೀಯ ವಲಯದಲ್ಲಿ ಹೊಸ ಸಂಚಲನ ಮೂಡಿಸಿದೆ.

ಗದಗ ಜಿಲ್ಲೆಯ ತಾಲ್ಲೂಕಿನ ಹೊರ್ತಿ ಗ್ರಾಮದಲ್ಲಿ ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿದ ಶ್ರೀರಾಮುಲು, ರಾಜ್ಯ ಕಾಂಗ್ರೆಸ್‌ನಲ್ಲಿ ಮುಖ್ಯಮಂತ್ರಿ ಬದಲಾವಣೆಗೆ ಸಂಬಂಧಿಸಿದ ಚಟುವಟಿಕೆಗಳು ನಡೆಯುತ್ತಿವೆ ಎಂದು ಅಭಿಪ್ರಾಯಪಟ್ಟರು. ಚಳಿಗಾಲದ ಅಧಿವೇಶನದ ಸಂದರ್ಭದಲ್ಲಿ ಎಲ್ಲ ಶಾಸಕರ ಸಹಿ ಸಂಗ್ರಹಿಸುವ ಪ್ರಯತ್ನಕ್ಕೆ ಸಿದ್ಧತೆ ನಡೆಯುತ್ತಿದೆ. ಈ ಪ್ರಕ್ರಿಯೆಯ ನಂತರ ಹೊಸ ನಾಯಕರು ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಳ್ಳಲಿದ್ದಾರೆ ಎಂದು ಅವರು ಹೇಳಿದರು.

ಮುಖ್ಯಮಂತ್ರಿ ಸ್ಥಾನ ಬದಲಾವಣೆಯ ಚರ್ಚೆಗೆ ಇತ್ತೀಚಿನ ರಾಜಕೀಯ ಬೆಳವಣಿಗೆಗಳೇ ಕಾರಣ ಎಂದು ಶ್ರೀರಾಮುಲು ವಿಶ್ಲೇಷಿಸಿದರು. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಇತ್ತೀಚೆಗೆ ನವದೆಹಲಿಗೆ ತೆರಳಿ ಕಾಂಗ್ರೆಸ್ ಪಕ್ಷದ ವರಿಷ್ಠ ನಾಯಕರೊಂದಿಗೆ ಮಾತುಕತೆ ನಡೆಸಿದ್ದಾರೆ. ದೆಹಲಿಯಿಂದ ವಾಪಸಾದ ಬಳಿಕ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಚರ್ಚಿಸಿದ್ದಾರೆ. ಈ ಬೆಳವಣಿಗೆಗಳು ರಾಜ್ಯದಲ್ಲಿ ನಾಯಕತ್ವ ಬದಲಾವಣೆಯ ಸಾಧ್ಯತೆಯ ಬಗ್ಗೆ ಸೂಚನೆ ನೀಡುತ್ತಿವೆ ಎಂದು ಅವರು ತಿಳಿಸಿದರು.

ರಾಜ್ಯ ಕಾಂಗ್ರೆಸ್‌ನಲ್ಲಿ ಮುಖ್ಯಮಂತ್ರಿ ಸ್ಥಾನದ ವಿಚಾರವಾಗಿ ನಡೆಯುತ್ತಿರುವ ರಾಜಕೀಯ ಬೆಳವಣಿಗೆಗಳನ್ನು ಉಲ್ಲೇಖಿಸಿದ ಶ್ರೀರಾಮುಲು, ಡಿ.ಕೆ. ಶಿವಕುಮಾರ್ ಅವರು ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡ ಬಳಿಕ ರಾಜ್ಯದ ಆಡಳಿತ ವ್ಯವಸ್ಥೆ ಹಳ್ಳಹಿಡಿದಿದೆ ಎಂದು ಟೀಕಿಸಿದರು. ಆಡಳಿತದ ವೈಫಲ್ಯವೂ ರಾಜ್ಯದಲ್ಲಿ ಮೂರನೇ ಮುಖ್ಯಮಂತ್ರಿಯ ಚರ್ಚೆಗೆ ಕಾರಣವಾಗಿದೆ ಎಂದು ಆರೋಪಿಸಿದರು.

ಮುಖ್ಯಮಂತ್ರಿ ಸ್ಥಾನದ ವಿಚಾರದಲ್ಲಿ ಕಾಂಗ್ರೆಸ್ ಪಕ್ಷದೊಳಗೆ ಉಂಟಾಗಿರುವ ರಾಜಕೀಯ ಗೊಂದಲ ಮುಂದಿನ ದಿನಗಳಲ್ಲಿ ಮತ್ತಷ್ಟು ಹೆಚ್ಚಾಗುವ ಸಾಧ್ಯತೆಯಿದೆ ಎಂಬ ಅಭಿಪ್ರಾಯವನ್ನೂ ಅವರು ವ್ಯಕ್ತಪಡಿಸಿದರು. ಹೊಸ ವರ್ಷದ ವೇಳೆಗೆ ರಾಜ್ಯಕ್ಕೆ ಹೊಸ ಮುಖ್ಯಮಂತ್ರಿ ಅಧಿಕಾರಕ್ಕೆ ಬರಬಹುದು. ಆದರೆ, ಯಾರು ಆ ಸ್ಥಾನವನ್ನು ಅಲಂಕರಿಸಲಿದ್ದಾರೆ ಎಂಬುದನ್ನು ಕಾದು ನೋಡಬೇಕಾಗಿದೆ ಎಂದು ಶ್ರೀರಾಮುಲು ಹೇಳಿದರು.

ಈ ನಡುವೆ, ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆಯಾಗಲಿದೆ ಎಂಬ ಚರ್ಚೆಗೆ ಕಾಂಗ್ರೆಸ್ ನಾಯಕರು ಯಾವ ರೀತಿಯಲ್ಲಿ ಪ್ರತಿಕ್ರಿಯಿಸಲಿದ್ದಾರೆ ಎಂಬ ಕುತೂಹಲ ಮೂಡಿದೆ. ಸಿದ್ದರಾಮಯ್ಯ ಮತ್ತು ಡಿ.ಕೆ. ಶಿವಕುಮಾರ್ ಅವರ ನಡುವಿನ ರಾಜಕೀಯ ಬೆಳವಣಿಗೆಗಳು, ಪಕ್ಷದ ಹೈಕಮಾಂಡ್‌ನ ನಿರ್ಧಾರ ಹಾಗೂ ಶಾಸಕರ ಅಭಿಪ್ರಾಯಗಳು ಮುಂದಿನ ದಿನಗಳಲ್ಲಿ ನಿರ್ಣಾಯಕವಾಗಲಿವೆ.

ಆದರೆ, ಶ್ರೀರಾಮುಲು ಮಾಡಿರುವ ಈ ಹೇಳಿಕೆ ಬಿಜೆಪಿ ನಾಯಕರ ರಾಜಕೀಯ ವಿಶ್ಲೇಷಣೆಯಾಗಿದ್ದು, ಮುಖ್ಯಮಂತ್ರಿ ಬದಲಾವಣೆ ಕುರಿತು ಕಾಂಗ್ರೆಸ್ ಹೈಕಮಾಂಡ್‌ನಿಂದ ಯಾವುದೇ ಅಧಿಕೃತ ಘೋಷಣೆ ಹೊರಬಿದ್ದಿಲ್ಲ. ಹೀಗಾಗಿ ರಾಜ್ಯಕ್ಕೆ ಮೂರನೇ ಮುಖ್ಯಮಂತ್ರಿ ಬರಲಿದ್ದಾರೆಯೇ ಅಥವಾ ಈಗಿನ ನಾಯಕತ್ವವೇ ಮುಂದುವರಿಯಲಿದೆಯೇ ಎಂಬುದು ಮುಂದಿನ ರಾಜಕೀಯ ಬೆಳವಣಿಗೆಗಳ ಮೇಲೆ ಅವಲಂಬಿತವಾಗಿದೆ.

ಪ್ರಧಾನಿ ಮೋದಿ ಜೊತೆ ಬಹಿರಂಗ ಚರ್ಚೆಗೆ ರಾಹುಲ್ ಗಾಂಧಿ ಸವಾಲು

1ನೇ ಪುಟದಿಂದ..

ಹಲವು ಪ್ರಮುಖ ವಿಷಯಗಳ ಕುರಿತು ಮಾತನಾಡಲು ಅವಕಾಶ ನೀಡುತ್ತಿಲ್ಲ ಎಂದು ಆರೋಪಿಸಿದ್ದಾರೆ. ಸಂಸತ್ತಿನಲ್ಲಿ ತಮ್ಮ ಮೈಕ್ ಸ್ಥಗಿತಗೊಳಿಸಲಾಗುತ್ತದೆ. ಹೀಗಾಗಿ ಸಂಸತ್ತಿನ ಹೊರಗೆ ಯಾವುದೇ ಮುಕ್ತ ವೇದಿಕೆಯಲ್ಲಿ ಮುಖಾಮುಖಿ ಚರ್ಚೆ ನಡೆಸೋಣ ಎಂದು ಆಗ್ರಹಿಸಿದ್ದಾರೆ.

ತಮ್ಮ ಸಾಮಾಜಿಕ ಜಾಲತಾಣದ ಪೋಸ್ಟ್‌ನಲ್ಲಿ ಪ್ರಧಾನಿ ಮೋದಿಯವರನ್ನು ಉದ್ದೇಶಿಸಿ ವ್ಯಂಗ್ಯವಾಡಿರುವ ಅವರು, ಚರ್ಚೆಗೆ ಬರುವಾಗ ಟೆಲಿಪ್ರಾಂಪ್ಟರ್ ಕೂಡ ತರಬಹುದು. ತೀರ್ಪುಗಾರರನ್ನು ಆಯ್ಕೆ ಮಾಡುವ ಸ್ವಾತಂತ್ರ್ಯವನ್ನೂ ಮೋದಿಯವರಿಗೇ ನೀಡಲಾಗುವುದು. ಅದಾನಿ ಅಥವಾ ಮೋಹನ್ ಭಾಗವತ್ ಅವರನ್ನು ಬೇಕಾದರೂ ತೀರ್ಪುಗಾರರನ್ನಾಗಿ ನೇಮಿಸಿಕೊಳ್ಳಲಿ. ಆದರೆ ಚರ್ಚೆಗೆ ಬರಬೇಕು. ದೇಶಕ್ಕೆ ನಿಜವಾದ ದೇಶದ್ರೋಹಿ ಯಾರು ಎಂಬುದು ತಿಳಿಯಬೇಕು ಎಂದು ಸವಾಲು ಹಾಕಿದ್ದಾರೆ.

ಇದಲ್ಲದೆ, ದೆಹಲಿಯ ವಾಯುಮಾಲಿನ್ಯ ಸಮಸ್ಯೆಯ ಬಗ್ಗೆಯೂ ಪ್ರಧಾನಿಯವರೊಂದಿಗೆ ಚರ್ಚಿಸಲು ಸಿದ್ಧವಿರುವುದಾಗಿ ತಿಳಿಸಿದ್ದಾರೆ. ಪ್ರಧಾನಿಯವರು ತಮ್ಮ ವಿಶೇಷ ಏರ್ ಚೇಂಬರ್‌ನಿಂದ ಹೊರಬಂದು ಸಾಮಾನ್ಯ ನಾಗರಿಕರಂತೆ ಉಸಿರಾಡುವ ಪರಿಸ್ಥಿತಿಯನ್ನು ಅನುಭವಿಸಬೇಕು ಎಂದು ವ್ಯಂಗ್ಯವಾಡಿದ್ದಾರೆ.

ಸೀತಾರಾಮನ್ ತಿರುಗೇಟು: ರಾಹುಲ್ ಗಾಂಧಿ ಅವರ ಸವಾಲಿಗೆ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ತಿರುಗೇಟು ನೀಡಿದ್ದಾರೆ. ಸಂಸತ್ತಿನಲ್ಲೇ ಚರ್ಚೆಗೆ ಸೂಕ್ತ ವೇದಿಕೆ ಇರುವಾಗ ಪ್ರತ್ಯೇಕ ವೇದಿಕೆಯಲ್ಲಿ ಚರ್ಚೆಗೆ ಪ್ರಧಾನಿಯವರನ್ನು ಆಹ್ವಾನಿಸುವ ಅಗತ್ಯವೇನು ಎಂದು ಪ್ರಶ್ನಿಸಿದ್ದಾರೆ. ರಾಹುಲ್ ಗಾಂಧಿ ಸಂಸತ್ತಿನ ಚರ್ಚೆಗಳಲ್ಲಿ ಸಮರ್ಪಕವಾಗಿ ಭಾಗವಹಿಸದೆ ದೂರ ಉಳಿಯುತ್ತಾರೆ ಎಂದು ಟೀಕಿಸಿರುವ ಅವರು, ಲೋಕಸಭೆಯ ವಿರೋಧ ಪಕ್ಷದ ನಾಯಕನಾಗಿ ತಮ್ಮ ಸಾಂವಿಧಾನಿಕ ಜವಾಬ್ದಾರಿಯನ್ನು ಗಂಭೀರವಾಗಿ ನಿರ್ವಹಿಸಬೇಕು ಎಂದು ಹೇಳಿದ್ದಾರೆ.

ಪ್ರಧಾನಿ ಮೋದಿ ಮತ್ತು ರಾಹುಲ್ ಗಾಂಧಿ ನಡುವಿನ ಈ ವಾಕ್ಸಮರ ಮುಂದಿನ ದಿನಗಳಲ್ಲಿ ಮತ್ತಷ್ಟು ತೀವ್ರಗೊಳ್ಳುವ ಸಾಧ್ಯತೆ ಇದ್ದು, ಬಹಿರಂಗ ಚರ್ಚೆಯ ಸವಾಲಿಗೆ ಪ್ರಧಾನಿ ಮೋದಿ ಯಾವ ರೀತಿಯಲ್ಲಿ ಪ್ರತಿಕ್ರಿಯಿಸಲಿದ್ದಾರೆ ಎಂಬ ಕುತೂಹಲ ರಾಜಕೀಯ ವಲಯದಲ್ಲಿ ಮೂಡಿದೆ.

ಜಿಎಸ್‌ಟಿ ಪಾಲು, ಬರ ಪರಿಹಾರ, ಕಬ್ಬು ಬೆಳೆಗಾರರ ಬೇಡಿಕೆ ವಿಷಯ ಪ್ರಸ್ತಾಪಿಸಿದ ಸಿಎಂ

1ನೇ ಪುಟದಿಂದ..

ಕಬ್ಬಿನ ಬೆಲೆ ಮತ್ತು ಎಥೆನಾಲ್ ಹಂಚಿಕೆ ಸೇರಿದಂತೆ ರೈತರ ಸಮಸ್ಯೆಗಳ ಕುರಿತು ಚರ್ಚಿಸಲು ಸರ್ವಪಕ್ಷ ನಿಯೋಗವನ್ನು ಪ್ರಧಾನಿ ಭೇಟಿಗೆ ಕರೆದೊಯ್ಯಲು ಸಿದ್ಧವಿರುವುದಾಗಿಯೂ ಅವರು ತಿಳಿಸಿದರು.

ಕಬ್ಬು ಬೆಳೆಗಾರರು ಸಂಕಷ್ಟ ಎದುರಿಸುತ್ತಿದ್ದಾರೆ ಎಂದು ಹೇಳಿದ ಡಿ ಕೆ ಶಿವಕುಮಾರ್, 2019ರಿಂದ ಸಕ್ಕರೆ–ಯ ಕನಿಷ್ಠ ಮಾರಾಟ ಬೆಲೆ ಪ್ರತಿ ಕೆ.ಜಿ.ಗೆ 31 ರೂಪಾಯಿಗಳಲ್ಲಿ ಸ್ಥಿರವಾಗಿದೆ ಎಂದು ಗಮನ ಸೆಳೆದರು. ಕರ್ನಾಟಕದ ಸಕ್ಕರೆ ವಲಯ ಎದುರಿಸುತ್ತಿರುವ ಸಮಸ್

ಬಿಜೆಪಿಗೆ ಮತ ಹಾಕಿದರೆ ಐದು ಗ್ಯಾರಂಟಿ ಯೋಜನೆಗಳು ಬಂದ್: ಶಿವರಾಜ್ ತಂಗಡಗಿ



ಕೊಪ್ಪಳ: ಬಿಜೆಪಿಗೆ ಮತ ಹಾಕಿದರೆ ರಾಜ್ಯ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳು ಸಂಪೂರ್ಣ ಬಂದ್ ಆಗಲಿವೆ ಎಂದು ಸಚಿವ ಶಿವರಾಜ್ ತಂಗಡಗಿ ಎಚ್ಚರಿಕೆ ನೀಡಿದರು.

ಕೊಪ್ಪಳ ಜಿಲ್ಲೆಯ ಕಾರಟಗಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಬಿಜೆಪಿಯವರು ಅಧಿಕಾರಕ್ಕೆ ಬಂದರೆ ಗೃಹಲಕ್ಷ್ಮಿ ಯೋಜನೆಯ 2,000, ಅನ್ನಭಾಗ್ಯ, ಶಕ್ತಿ ಯೋಜನೆಯ ಉಚಿತ ಬಸ್ ಪ್ರಯಾಣ ಹಾಗೂ ಯುವನಿಧಿ ಸೇರಿದಂತೆ ಗ್ಯಾರಂಟಿ ಯೋಜನೆಗಳು ಸ್ಥಗಿತಗೊಳ್ಳಲಿವೆ ಎಂದು ಹೇಳಿದರು. ಕೇಂದ್ರ ಸರ್ಕಾರ ಅದಾನಿ, ಅಂಬಾನಿಯಂತಹ ಉದ್ಯಮಿಗಳ ಸಾಲ ಮನ್ನಾ ಮಾಡುತ್ತದೆ. ಆದರೆ ರೈತರ ಸಾಲ ಮನ್ನಾ ಮಾಡಲು ಏಕೆ ಮುಂದಾಗುತ್ತಿಲ್ಲ? ರೈತರ ಬಗ್ಗೆ ನಿಜವಾದ ಕಾಳಜಿ ಇದ್ದರೆ ಅವರ ಸಾಲ ಮನ್ನಾ ಮಾಡಲಿ ಎಂದು ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದರು.

ಅಸ್ಸಾಂನಲ್ಲಿ ಘೋರ ದುರಂತ: ವಿದ್ಯಾರ್ಥಿಗಳು ಪ್ರಯಾಣಿಸುತ್ತಿದ್ದ ಮಿನಿ ಬಸ್‌ಗೆ ಟ್ರಕ್ ಡಿಕ್ಕಿ, 23 ಸಾವು

1ನೇ ಪುಟದಿಂದ..

(KA01AT0977 ನೋಂದಣಿ ಸಂಖ್ಯೆಯ ಟ್ರಕ್) ಡಿಕ್ಕಿ ಹೊಡೆದಿದೆ. ಇನ್ನು, ಮಿನಿ ಬಸ್‌ನಲ್ಲಿ ಸುಮಾರು 35 ರಿಂದ 40 ಮಂದಿ ಪ್ರಯಾಣಿಕರಿದ್ದರು ಎನ್ನಲಾಗಿದ್ದು, ಅವರಲ್ಲಿ ಹೆಚ್ಚಿನವರು ಶಾಲಾ-ಕಾಲೇಜು ವಿದ್ಯಾರ್ಥಿಗಳಾಗಿದ್ದರು ಎಂದು ಪ್ರಾಥಮಿಕ ವರದಿಗಳು ತಿಳಿಸಿವೆ. ಪತನ್ಮಧ್ಯೆ, ಡಿಕ್ಕಿಯ ತೀವ್ರತೆಗೆ ಟ್ರಾವೆಲರ್ ವಾಹನ ಸಂಪೂರ್ಣ ನಜ್ಜುಗುಜ್ಜಾಗಿದ್ದು, 23 ಮಂದಿ ಸಾವನ್ನಪ್ಪಿದ್ದಾರೆ. ಜೊತೆಗೆ 20 ಮಂದಿಗೆ ಗಾಯಗಳಾಗಿದೆ.

ರಾಷ್ಟ್ರೀಯ ಉದ್ಯಾನವನದ ಬಳಿ ನಿಗದಿಪಡಿಸಲಾದ ವೇಗದ ಮಿತಿಯನ್ನು ಉಲ್ಲಂಘಿಸಿ ಮಿನಿ ಬಸ್ ಅತಿ ವೇಗದಲ್ಲಿ ಚಲಿಸುತ್ತಿತ್ತು ಎಂದು ಗೋಲಾಘಾಟ್ ಹಿರಿಯ ಪೊಲೀಸ್ ವರಿಷ್ಠಾಧಿಕಾರಿ ಸ್ವಪ್ನನೀಲ್ ದೇಕಾ ತಿಳಿಸಿದ್ದಾರೆ. ಚಾಲಕನ ನಿಯಂತ್ರಣ ತಪ್ಪಿ ವಾಹನವು ಕಂಟೈನರ್ ಟ್ರಕ್‌ಗೆ ಡಿಕ್ಕಿ ಹೊಡೆದಿರುವ ಸಾಧ್ಯತೆಯಿದೆ.

ಆಭರಣ ಪ್ರಿಯರಿಗೆ ಗುಡ್ ನ್ಯೂಸ್: ಚಿನ್ನದ ಬೆಲೆಯಲ್ಲಿ ಭಾರೀ ಕುಸಿತ!

1ನೇ ಪುಟದಿಂದ..

611 ರೂಪಾಯಿ ಕಡಿಮೆಯಾಗಿದ್ದು ಇಂದು 1 ಗ್ರಾಂ ಚಿನ್ನದ ಬೆಲೆ 13,849ಕ್ಕೆ ತಲುಪಿದೆ. ಇನ್ನು 22 ಕ್ಯಾರೆಟ್ ನ 10 ಗ್ರಾಂ ಚಿನ್ನದ ಬೆಲೆಯಲ್ಲಿ 560 ರೂಪಾಯಿ ಕಡಿಮೆಯಾಗಿದ್ದು ಇಂದಿನ ದರ 12,695 ರುಪಾಯಿ ಇದೆ.

ದೇಶೀಯ ಮಾರುಕಟ್ಟೆಯೊಂದಿಗೆ ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲೂ ಚಿನ್ನದ ಬೆಲೆಗಳು ಕುಸಿಯುತ್ತಿವೆ. ನವೆಂಬರ್ 13ರ ಬೆಳಿಗ್ಗೆ, ಸ್ಪಾಟ್ ಚಿನ್ನವು ಪ್ರತಿ ಔನ್ಸ್‌ಗೆ $3,880.93ಕ್ಕೆ ವಹಿವಾಟು ನಡೆಸುತ್ತಿತ್ತು. ಅಂತರರಾಷ್ಟ್ರೀಯ ಬೆಲೆಗಳು ಕುಸಿಯುತ್ತಿರುವುದು ಮತ್ತು ದೇಶೀಯ ಬೇಡಿಕೆ ದುರ್ಬಲವಾಗುತ್ತಿರುವುದು ಭಾರತೀಯ ಬೆಳ್ಳಿ ಮಾರುಕಟ್ಟೆಯ ಮೇಲೆ ಪರಿಣಾಮ ಬೀರುತ್ತಿದೆ. ಅದಕ್ಕಾಗಿಯೇ ಚಿನ್ನದ ಬೆಲೆಗಳು ನಿರಂತರವಾಗಿ ಕುಸಿಯುತ್ತಿವೆ.

ಚಿನ್ನದ ಜೊತೆಗೆ, ಬೆಳ್ಳಿ ಬೆಲೆಯೂ ಸಹ ಕುಸಿತವನ್ನು ಮುಂದುವರೆಸಿದೆ. ನವೆಂಬರ್ 13 ರ ಬೆಳಿಗ್ಗೆ, ಭಾರತದಲ್ಲಿ ಬೆಳ್ಳಿಯ ಬೆಲೆ ಪ್ರತಿ ಕಿಲೋಗ್ರಾಂಗೆ 1,99,900 ರೂ.ಗಳಲ್ಲಿ ದಾಖಲಾಗಿದೆ. ಪತನ್ಮಧ್ಯೆ, ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿ ಸ್ಪಾಟ್ ಬೆಳ್ಳಿ ಪ್ರತಿ ಔನ್ಸ್‌ಗೆ $50.12 ಕ್ಕೆ ವಹಿವಾಟು ನಡೆಸುತ್ತಿತ್ತು.

ಈ ವರ್ಷದ ಜನವರಿಯಲ್ಲಿ, ಭಾರತದಲ್ಲಿ ಬೆಳ್ಳಿಯ ಬೆಲೆ ಪ್ರತಿ ಕಿಲೋಗ್ರಾಂಗೆ 4 ಲಕ್ಷ ರೂ.ಗಳ ದಾಖಲೆಯ ಗರಿಷ್ಠ ಮಟ್ಟವನ್ನು ತಲುಪಿದೆ. ಪ್ರಸ್ತುತ ಬೆಲೆಗಳು ಆ ದಾಖಲೆಯ ಮಟ್ಟಕ್ಕಿಂತ ಕೆಳಗಿವೆ. ಚಿನ್ನ ಮತ್ತು ಬೆಳ್ಳಿ ಬೆಲೆಗಳು ಕಡಿಮೆಯಾಗುತ್ತಿರುವುದರಿಂದ, ಖರೀದಿದಾರರು ಈಗ ಮಾರುಕಟ್ಟೆಯ ಮುಂದಿನ ನಡೆಗಾಗಿ ಕಾಯುತ್ತಿದ್ದಾರೆ.

ದಾಖಲೆ ಬರೆದ ಹಾಸನಾಂಬ ದರ್ಶನೋತ್ಸವ: 30 ಲಕ್ಷಕ್ಕೂ ಹೆಚ್ಚು ಭಕ್ತರಿಂದ ದರ್ಶನ; 29 ಕೋಟಿ ಆದಾಯ ಸಂಗ್ರಹ!

1ನೇ ಪುಟದಿಂದ..

ಈ ವೇಳೆ ನೆರೆದಿದ್ದವರಿಗೆ ದೇವಿ ದರ್ಶನಕ್ಕೆ ಅವಕಾಶ ಕಲ್ಪಿಸಲಾಗಿದ್ದು, 5,600 ಮಂದಿ ದೇವಿ ದರ್ಶನ ಪಡೆದಿದ್ದರು.

ಅಕ್ಟೋಬರ್ 30 ರಿಂದ ನವೆಂಬರ್ 10 ರವರೆಗೆ ಒಟ್ಟು 12 ದಿನಗಳು ಕಾಲ ದೇಶ, ರಾಜ್ಯ, ಹೊರ ರಾಜ್ಯ, ಜಿಲ್ಲೆ, ಹೊರ ಜಿಲ್ಲೆಗಳಿಂದ 30,06,000 ಭಕ್ತರು ದೇವಿ ದರ್ಶನ ಪಡೆದಿದ್ದಾರೆ ಎಂದು ಗಂಗಣ್ಣನವರ್ ಮಾಹಿತಿ ನೀಡಿದ್ದಾರೆ.

ಹಾಸನಾಂಬ ದೇವಿ ಹಾಗೂ ಶ್ರೀ ಸಿದ್ದೇಶ್ವರಸ್ವಾಮಿ ಹುಂಡಿ ಎಣಿಕೆ ಕಾರ್ಯ ಮುಕ್ತಾಯವಾಗಿದ್ದು, 1,000 ರೂ.ನ ವಿಶೇಷ ದರ್ಶನ ಟಿಕೆಟ್ ಮಾರಾಟದಿಂದ 16,98,11,257 ರೂಪಾಯಿ, 300 ರೂ.ನ ವಿಶೇಷ ದರ್ಶನ ಟಿಕೆಟ್ ಮಾರಾಟದಿಂದ 7,24,14,000 ರೂಪಾಯಿ, ಲಾಡು ಮಾರಾಟದಿಂದ 1,35,99,156 ರೂಪಾಯಿ, ದೇಣಿಗೆಯಾಗಿ 5,91,228 ರೂ, ಇ-ಹುಂಡಿಯಿಂದ 13,13,264 ರೂ, ಜಾಹೀರಾತಿನಿಂದ 5,74,000 ರೂಪಾಯಿ ಸೇರಿ ಒಟ್ಟು 25,82,88,199 ರೂಪಾಯಿಗಳು ಸಂಗ್ರಹವಾಗಿದೆ ಎಂದರು.

ಭಕ್ತರು ಕಾಣಿಕೆ ರೂಪದಲ್ಲಿ 3,71,63,933 ರೂಪಾಯಿ ಹುಂಡಿಯಲ್ಲಿ ಹಾಕಿದ್ದು ಎಲ್ಲಾ ಸೇರಿ ಒಟ್ಟು 29,55,27,852 ರೂಪಾಯಿ ಆದಾಯ ಸಂಗ್ರಹವಾಗಿದ್ದು, ಕಳೆದ ವರ್ಷಕ್ಕಿಂತ 4 ಕೋಟಿ ಹೆಚ್ಚಿನ ಆದಾಯ ಬಂದಿದೆ. 43.170 ಗ್ರಾಂ ಚಿನ್ನ ಹಾಗೂ 1.255 ಕೆಜಿ ಬೆಳ್ಳಿ ಕಾಣಿಕೆ ರೂಪದಲ್ಲಿ ಭಕ್ತರು ನೀಡಿದ್ದಾರೆ ಎಂದು ತಿಳಿಸಿದರು.

ಆಂಧ್ರಪ್ರದೇಶದ ಪ್ರವಾಹ ಪೀಡಿತ ಪ್ರದೇಶಗಳಲ್ಲಿ ವಿದ್ಯುತ್ ಸಂಪರ್ಕ ಮರುಸ್ಥಾಪನೆ: ಯಾದಗಿರಿ ಜೆಸ್ಕಾಂ ಸಿಬ್ಬಂದಿ ವಿಶ್ವಾರಾಧ್ಯ ಸ್ವಾಮಿ ಗಂಗಾಧರಮಠದಗೆ ರಾಚನಗೌಡ ಮುದ್ನಾಳ ಸನ್ಮಾನ



ಯಾದಗಿರಿ: ಆಂಧ್ರಪ್ರದೇಶದಲ್ಲಿ ಚಂಡಮಾರುತದ ಪರಿಣಾಮವಾಗಿ ಉಂಟಾದ ಭೀಕರ ಪ್ರವಾಹದಿಂದ ವಿದ್ಯುತ್ ವ್ಯವಸ್ಥೆ ಸಂಪೂರ್ಣ ಅಸ್ತವ್ಯಸ್ತಗೊಂಡ ಸಂದರ್ಭದಲ್ಲಿ, ವಿದ್ಯುತ್ ಸಂಪರ್ಕವನ್ನು ಪುನಃಸ್ಥಾಪಿಸುವ ಕಾರ್ಯದಲ್ಲಿ ಯಾದಗಿರಿ ಜೆಸ್ಕಾಂ ವಿಭಾಗದ ಸಿಬ್ಬಂದಿ ವಿಶ್ವಾರಾಧ್ಯ ಸ್ವಾಮಿ ಗಂಗಾಧರಮಠದ ನೆರವಿನ ಹಸ್ತ ಚಾಚಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದು ಯಾದಗಿರಿ ವಿಧಾನಸಭಾ ಕ್ಷೇತ್ರದ ಬಿಜೆಪಿಯ ಹಿರಿಯ ಮುಖಂಡರಾದ ರಾಚನಗೌಡ ಮುದ್ನಾಳ ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಮಾನವೀಯ ಸೇವಾ ಕಾರ್ಯದಲ್ಲಿ ಯಾದಗಿರಿಯ ವಿಶ್ವಾರಾಧ್ಯ ಸ್ವಾಮಿ ಗಂಗಾಧರಮಠದ ಜೆಸ್ಕಾಂ ಸಿಬ್ಬಂದಿ ಹಲವು ದಿನಗಳ ಕಾಲ ಹಗಲಿರುಳು ಶ್ರಮಿಸಿ ಆಂಧ್ರಪ್ರದೇಶದ ಪ್ರವಾಹ ಪೀಡಿತ ಪ್ರದೇಶಗಳಲ್ಲಿ ವಿದ್ಯುತ್ ಸಂಪರ್ಕ ಮರುಸ್ಥಾಪಿಸುವಲ್ಲಿ ಮಹತ್ವದ ಪಾತ್ರ ವಹಿಸಿದ್ದಾರೆ. ಇವರ ನಿಸ್ವಾರ್ಥ ಸೇವೆ, ಕರ್ತವ್ಯನಿಷ್ಠೆ ಹಾಗೂ ಸೇವಾ ಮನೋಭಾವವನ್ನು ಗುರುತಿಸಿದ ರಾಚನಗೌಡ ಮುದ್ನಾಳ ಅವರು ಸಿಬ್ಬಂದಿಯ ಮನೆಗೆ ಭೇಟಿ ನೀಡಿ, ಅವರನ್ನು ಸನ್ಮಾನಿಸಿ ಅಭಿನಂದಿಸಿದರು.

ಚಂಡಮಾರುತದ ಅಬ್ಬರಕ್ಕೆ ಸಾವಿರಾರು ವಿದ್ಯುತ್ ಕಂಬಗಳು ಧರೆಗುರುಳಿದ್ದು, ವಿದ್ಯುತ್ ತಂತಿಗಳು ತುಂಡಾಗಿ ಅನೇಕ ಗ್ರಾಮಗಳು ಕತ್ತಲಲ್ಲಿ ಮುಳುಗಿದ್ದವು. ಸುಮಾರು ಒಂದು ಸಾವಿರಕ್ಕೂ ಹೆಚ್ಚು ವಿದ್ಯುತ್ ಕಂಬಗಳು ಹಾನಿಗೊಳಗಾಗಿದ್ದರಿಂದ ವಿದ್ಯುತ್ ವ್ಯವಸ್ಥೆಯನ್ನು ಪುನಃ ಸುಸ್ಥಿತಿಗೆ ತರುವುದು ಅತ್ಯಂತ ಸವಾಲಿನ ಕಾರ್ಯವಾಗಿತ್ತು.

ಇಂತಹ ಪ್ರತಿಕೂಲ ಹವಾಮಾನ, ಭೀಕರ ಪ್ರವಾಹ ಹಾಗೂ ಹಲವು ಅಡೆತಡೆಗಳ ನಡುವೆಯೂ ಯಾದಗಿರಿ ಜೆಸ್ಕಾಂ ಸಿಬ್ಬಂದಿ ತಮ್ಮ ಕರ್ತವ್ಯವನ್ನು ಕೇವಲ ಉದ್ಯೋಗವೆಂದು ಪರಿಗಣಿಸದೆ, ಮಾನವೀಯ ಸೇವೆಯೆಂದು ಭಾವಿಸಿ ದೂರದ ರಾಜ್ಯಕ್ಕೆ ತೆರಳಿ ಅವಿರತವಾಗಿ ಶ್ರಮಿಸಿರುವುದು ನಿಜಕ್ಕೂ ಶ್ಲಾಘನೀಯವಾಗಿದೆ.

ತಮ್ಮ ಕುಟುಂಬ ಹಾಗೂ ತವರು ರಾಜ್ಯದಿಂದ ದೂರವಿದ್ದು, ಹಲವು ದಿನಗಳ ಕಾಲ ಶ್ರಮಿಸಿ ಆಂಧ್ರಪ್ರದೇಶದ ಸಾವಿರಾರು ಜನರ ಬದುಕಿನಲ್ಲಿ ಮತ್ತೆ ಬೆಳಕಿನ ಆಶಾಕಿರಣ ಮೂಡಿಸಲು ನೆರವಾದ ಸಿಬ್ಬಂದಿಯ ಕಾರ್ಯ ಸದಾ ಸ್ಮರಣೀಯ. ಇವರ ಕರ್ತವ್ಯಪರತೆ, ಸೇವಾಬದ್ಧತೆ ಹಾಗೂ ಮಾನವೀಯ ಕಳಕಳಿ ಸಮಾಜದ ಪ್ರತಿಯೊಬ್ಬರಿಗೂ ಸ್ಫೂರ್ತಿಯಾಗಬೇಕು. ಸಂಕಷ್ಟದ ಸಂದರ್ಭದಲ್ಲಿ ರಾಜ್ಯದ ಗಡಿಗಳನ್ನು ಮೀರಿ ಮಾನವೀಯತೆಯೇ ಮುಖ್ಯ ಎಂಬುದನ್ನು ಈ ಸಿಬ್ಬಂದಿ ತಮ್ಮ ಸೇವೆಯ ಮೂಲಕ ತೋರಿಸಿಕೊಟ್ಟಿದ್ದಾರೆ ಎಂದು ಅಭಿನಂದಿಸಲಾಯಿತು.

ಈ ಸಂದರ್ಭದಲ್ಲಿ ಭೀಮನಗೌಡ ಕ್ಯಾತನಾಳ, ಯಾದಗಿರಿ ಶಾಖೆಯ ಶಾಖಾಧಿಕಾರಿ ದೇವಪ್ಪ, ವಿದ್ಯುತ್ ಗುತ್ತಿಗೆದಾರರಾದ ಶಿವಕುಮಾರ ಸ್ವಾಮಿ ಗಂಗಾಧರಮಠ, ಶಿವಕುಮಾರ ಹಿರೇಮಠ, ವಿರೂಪಾಕ್ಷಯ್ಯ ಸ್ವಾಮಿ ಹಾಗೂ ಜೈಪಾಲ ರೆಡ್ಡಿ ಉಪಸ್ಥಿತರಿದ್ದರು.

ಇ-ಖಾತೆ ವಿಚಾರದಲ್ಲಿ 15 ಸಾವಿರ ಹಣದ ವಿವಾದ: ಮಡಿಕೆಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಗಲಾಟೆ!



ಕುಣಿಗಲ್: ತಾಲ್ಲೂಕಿನ ಕೊತ್ತಗೆರೆ ಹೋಬಳಿಯ ಮಡಿಕೆಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸ್ವಂತ ಜಮೀನಿಗೆ ಇ-ಖಾತೆ ಮಾಡಿಸಿಕೊಳ್ಳುವ ವಿಚಾರವಾಗಿ 15 ಸಾವಿರ ಹಣದ ವ್ಯವಹಾರಕ್ಕೆ ಸಂಬಂಧಿಸಿದಂತೆ ವಿವಾದ ಉಂಟಾಗಿ ಪಂಚಾಯಿತಿ ಆವರಣದಲ್ಲಿ ಗಲಾಟೆ ನಡೆದಿರುವ ಘಟನೆ ಬೆಳಕಿಗೆ ಬಂದಿದೆ. ಮಡಿಕೆಹಳ್ಳಿ ಗ್ರಾಮದ 80 ವರ್ಷ ವಯಸ್ಸಾದ ವೃದ್ದೆ ಗಾಯಿತ್ರಮ್ಮ ಅವರು ತಮ್ಮ ಸ್ವಂತ ಆಸ್ತಿಗೆ ಇ-ಖಾತೆ ಮಾಡಿಸಿಕೊಳ್ಳುವ ವಿಚಾರವಾಗಿ ಪಿಡಿಓ ಮಹದೇವರವರಿಗೆ 15000 ಲಂಚ ಕೊಟ್ಟಿರುವುದಾಗಿ ಮಾಜಿ ಗ್ರಾಮ ಪಂಚಾಯಿತಿ ಸದಸ್ಯ ವೆಂಕಟೇಶ್ ರಾಜಹುಲಿ ಅವರ ಹತ್ತಿರ 80 ವರ್ಷದ ವೃದ್ದೆ ತನ್ನ ಅಳಲನ್ನ ತೋಡಿಕೊಂಡಿದ್ದರು ಎನ್ನಲಾಗಿದೆ. ಈ ಸಂಧರ್ಭದಲ್ಲಿ ಗ್ರಾಮ ಪಂಚಾಯತಿಗೆ ಕೇಳಲು ಹೋದಾಗ ಪಿಡಿಒ 15000 ಸಾಲ ತೆಗೆದುಕೊಂಡಿರುವುದಾಗಿ ಹೇಳಿದ ವಿಡಿಯೋ ಸಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿದೆ ಆದರೆ ವೃದ್ದೆ ಲಂಚ ಕೊಟ್ಟಿರುವುದಾಗಿ ಪಿಡಿಒ ಮುಂದೆ ಕಣ್ಣೀರು ಹಾಕುತ್ತಿದ್ದಾರೆ ಇದರ ವಿಚಾರ ವಾಗಿ ಪಂಚಾಯಿತಿಯಲ್ಲಿ ಗಲಾಟೆ ನಡೆದಿದ್ದು, ಈ ಹಣದ ವಿಚಾರವೇ ಪಂಚಾಯಿತಿಯಲ್ಲಿ ಗಲಾಟೆಗೆ ಕಾರಣವಾಗಿದೆ ಎಂದು ತಿಳಿದುಬಂದಿದೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಗಂಗಾಮಹದೇವ ಅವರು ಗಾಯಿತ್ರಮ್ಮ ಅವರಿಂದ 15,000 ಸಾಲ ಪಡೆದಿರುವುದಾಗಿ ಒಪ್ಪಿಕೊಂಡಿದ್ದಾರೆ ಎಂದು ಸಮಾಜಿಕ ಜಾಲ ತಾಣದಲ್ಲಿ ವಿಡಿಯೋ ಹರಿದಾಡುತ್ತಿದೆ

ಆದರೆ ಈ ಹಣ ವೈಯಕ್ತಿಕ ಸಾಲವೇ ಅಥವಾ ಇ-ಖಾತೆ ಮಾಡಿಸುವ ಪ್ರಕ್ರಿಯೆಗೆ ಸಂಬಂಧಿಸಿದ ವ್ಯವಹಾರವೇ ಎಂಬುದು ಇನ್ನೂ ಸ್ಪಷ್ಟವಾಗಬೇಕಿದೆ. ಈ ಕುರಿತು ಸಮಗ್ರ ತನಿಖೆಯಿಂದ ಮಾತ್ರ ಸತ್ಯಾಂಶ ಹೊರಬರಬೇಕಿದೆ.

ಗ್ರಾಮ ಪಂಚಾಯಿತಿಯಲ್ಲಿ ನಡೆದ ಮಾತಿನ ಚಕಮಕಿ ಹಾಗೂ ಗಲಾಟೆಯ ದೃಶ್ಯಗಳು ಮತ್ತು ಧ್ವನಿಮುದ್ರಣಗಳು ಪ್ರಕರಣದ ಬಗ್ಗೆ ಸಾರ್ವಜನಿಕರಲ್ಲಿ ಚರ್ಚೆಗೆ ಕಾರಣವಾಗಿವೆ.

ಗ್ರಾಮೀಣ ಭಾಗದ ಜನರು ತಮ್ಮ ಸ್ವಂತ ಸ್ವತ್ತಿನ ದಾಖಲೆಗಳನ್ನು ಪಡೆಯಲು ಇಂತಹ ಹಣದ ವ್ಯವಹಾರದ ವಿವಾದಗಳಿಗೆ ಸಿಲುಕಬೇಕಾದ ಪರಿಸ್ಥಿತಿ ಬರಬಾರದು. ಈ ಹಿನ್ನೆಲೆಯಲ್ಲಿ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ನಿಷ್ಪಕ್ಷಪಾತ ತನಿಖೆ ನಡೆಸಬೇಕು ಎಂಬ ಒತ್ತಾಯ ಸಾರ್ವಜನಿಕ ವಲಯದಲ್ಲಿ ಕೇಳಿಬಂದಿದೆ. ಇ-ಖಾತೆ ಹೆಸರಿನಲ್ಲಿ ನಡೆದ ಹಣದ ವ್ಯವಹಾರದ ನೈಜ ಸ್ವರೂಪವೇನು? ಕಆಜಿ ಹೇಳಿರುವ ಸಾಲದ ವಿಚಾರಕ್ಕೂ ಇ-ಖಾತೆ ವಿವಾದಕ್ಕೂ ಏನು ಸಂಬಂಧ? ಈ ಎಲ್ಲಾ ಪ್ರಶ್ನೆಗಳಿಗೆ ಅಧಿಕಾರಿಗಳ ತನಿಖೆಯಿಂದ ಉತ್ತರ ಸಿಗಬೇಕಿದೆ.

ತುಂಗಭದ್ರಾ ಕಾಲುವೆಗಳಿಗೆ ನವೆಂಬರ್ 20ರವರೆಗೆ ನೀರು: ತಂಗಡಗಿ



ಕೊಪ್ಪಳ: ತುಂಗಭದ್ರಾ ಜಲಾಶಯದಲ್ಲಿರುವ ಕರ್ನಾಟಕದ ಪಾಲಿನ 7 ಟಿಎಂಸಿ ಅಡಿ ನೀರಿನಲ್ಲಿ ನ. 20ರವರೆಗೆ ತುಂಗಭದ್ರಾ ಕಾಲುವೆಗಳಿಗೆ ನೀರು ಹರಿಸುತ್ತೇವೆ ಎಂದು ಐಸಿಸಿ ಸಲಹಾ ಸಮಿತಿ ಅಧ್ಯಕ್ಷ ಶಿವರಾಜ ತಂಗಡಗಿ ಹೇಳಿದರು.

ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರೂ ಆದ ತಂಗಡಗಿ ಶನಿವಾರ ಇಲ್ಲಿ ಸುದ್ದಿಗಾರರ ಜೊತೆ ಮಾತನಾಡಿ, ರೈತರಿಗೆ ಅನುಕೂಲವಾಗಬೇಕು ಎಂದು ಯೋಚಿಸಿ ನ. 30ರವರೆಗೆ ಸಹ ನೀರು ಹರಿಸುವ ಪ್ರಯತ್ನದಲ್ಲಿ ಇದ್ದೇವೆ. 20ರ ತನಕವಂತೂ ನೀರು ಕೊಟ್ಟೆ ಕೊಡುತ್ತೇವೆ ಎಂದು ಹೇಳಿದರು.

ಆಂಧ್ರಪ್ರದೇಶದ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಅವರೊಂದಿಗೆ ಡಿ.ಕೆ. ಶಿವಕುಮಾರ ಅವರು ಮಾತನಾಡಲಿದ್ದಾರೆ. ಆಂಧ್ರ ಪಾಲಿನ ನಾಲ್ಕು ಟಿಎಂಸಿ ಅಡಿ ನೀರು ಈಗಿನ ಸಂಕಷ್ಟದ ಸಂದರ್ಭದಲ್ಲಿ ಕರ್ನಾಟಕಕ್ಕೆ ಬಳಸಿಕೊಳ್ಳುವ ಪ್ರಯತ್ನದಲ್ಲಿದ್ದೇವೆ. ಇದಕ್ಕೆ ಆಂಧ್ರದ ಅನುಮತಿ ಬೇಕಿದೆ ಎಂದರು.

ಕಾದು ಬೆಳೆಸಿ ನಾಡು ಉಳಿಸಿ
ನೀರನ್ನು ಮಿತವಾಗಿ ಬಳಸಿ

ಎಂಟು ವರ್ಷದ ಕಲಾ ಸೇವೆಗೆ ಸಾಕ್ಷಿಯಾಗಲಿದೆ ಕೂಡ್ಲಿಗಿ: ನಾಳೆ ಕಲಾಭಾರತಿ ಕಲೋತ್ಸವದಲ್ಲಿ ಸಾಧಕರಿಗೆ ಗೌರವ



ಕೂಡ್ಲಿಗಿ: ಕಲಾಭಾರತಿ ಕಲಾ ಸಂಘ (ರಿ.) ಹಿರೇಹೆಗ್ಡಾಳ್ ವತಿಯಿಂದ ಎಂಟನೇ ಸಾಂಸ್ಕೃತಿಕ ಕಲೋತ್ಸವ ಹಾಗೂ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ನ. 15ರಂದು ಭಾನುವಾರ ಬೆಳಿಗ್ಗೆ 10.30ಕ್ಕೆ ಪಟ್ಟಣದ ಶ್ರೀ ವಿನಾಯಕ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಅಂಗವಾಗಿ 2026-27ನೇ ಸಾಲಿನಲ್ಲಿ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸಾಧನೆಗೈದ ಸಾಧಕರಿಗೆ ರಾಜ್ಯ ಪ್ರಶಸ್ತಿ ನೀಡಿ ಗೌರವಿಸಲಾಗುವುದು. ಸಾಹಿತ್ಯ, ಕಲೆ, ಸಂಸ್ಕೃತಿ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಪ್ರತಿಭೆಗಳನ್ನು ಗುರುತಿಸಿ ಪ್ರೋತ್ಸಾಹಿಸುವ ಉದ್ದೇಶದಿಂದ ಈ ಕಾರ್ಯಕ್ರಮ ಆಯೋಜಿಸಲಾಗಿದೆ.

ಕಾರ್ಯಕ್ರಮಕ್ಕೆ ಶ್ರೀ ಶ್ರೀ ಜಗದ್ಗುರು ಸೋಮಶಂಕರ ಮಹಾಸ್ವಾಮಿಗಳು, ಶ್ರೀ ಪ್ರಶಾಂತ ಸಾಗರ ಶಿವಾಚಾರ್ಯ ಮಹಾಸ್ವಾಮಿಗಳು, ಶ್ರೀ ಐಮಡಿ ಶರಣಾರ್ಯರು ಹಾಗೂ ಶ್ರೀ ಪಂಚಾಕ್ಷರಿ ಶಿವಾಚಾರ್ಯ ಮಹಾಸ್ವಾಮಿಗಳು ದಿವ್ಯ ಸಾನ್ನಿಧ್ಯ ವಹಿಸಲಿದ್ದಾರೆ.

ಕರ್ನಾಟಕ ರಾಜ್ಯ ಅನ್ನದಾತ ರೈತ ಸಂಘದ ಸಂಸ್ಥಾಪಕ ಅಧ್ಯಕ್ಷ ಎಂ. ಪ್ರಕಾಶ್ ತಿಮ್ಮಲಾಪುರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದು, ಕೂಡ್ಲಿಗಿ ವಿಧಾನಸಭಾ ಕ್ಷೇತ್ರದ ಶಾಸಕ ಡಾ. ಎನ್.ಟಿ. ಶ್ರೀನಿವಾಸ್ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಮಾಜಿ ಸಚಿವ ಬಿ. ಶ್ರೀರಾಮುಲು, ಚಿತ್ರದುರ್ಗ ಶಾಸಕ

ಜಿಲ್ಲಾಡಳಿತದಿಂದ ವೀರರಾಣಿ ಒನಕೆ ಓಬವ್ವ ಜಯಂತಿ ಆಚರಣೆ



ರಾಯಚೂರು: ಇತಿಹಾಸದ ಪುಟಗಳಲ್ಲಿ ಸಾಹಸ, ತ್ಯಾಗ ಮತ್ತು ಬಲಿದಾನದ ಸಂಕೇತವಾಗಿರುವ ವೀರರಾಣಿ ಒಣಕೆ ಓಬವ್ವ ನಮ್ಮೆಲ್ಲರಿಗೂ ಸದಾ ಸ್ಫೂರ್ತಿದಾಯಕವಾಗಿದೆ ಎಂದು ಅಪರ ಜಿಲ್ಲಾಧಿಕಾರಿಗಳಾದ ಸೋಮಲಿಂಗ ಗೋಪಾಲ ಗೆ–ಣ್ಣೂರು ಹೇಳಿದರು.

ರಾಯಚೂರು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ವೀರರಾಣಿ ಒನಕೆ ಓಬವ್ವ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಒಬ್ಬ ಮಹಿಳೆ ತನ್ನ ಪ್ರಾಣವನ್ನೇ ಪಣಕ್ಕಿಟ್ಟು ನಾಡನ್ನು ರಕ್ಷಿಸಿದ ಆ ಶೌರ್ಯವು ಇಂದಿನ ಹೆಣ್ಣುಮಕ್ಕಳಿಗೆ ಧೈರ್ಯ ಮತ್ತು ಆತ್ಮವಿಶ್ವಾಸದ ಪ್ರತೀಕವಾಗಿದೆ. ಡಾ.ಬಾಬಾಸಾಹೇಬ್ ಅಂಬೇಡ್ಕರ್ ಅವರ ನೇತೃತ್ವದ ಸಂವಿಧಾನವು ಇಂದು ಎಲ್ಲರಿಗೂ ಸಮಾನತೆ ಮತ್ತು ಸಮಾನ ಅವಕಾಶಗಳನ್ನು ಕಲ್ಪಿಸಿಕೊಟ್ಟಿದ್ದು, ಇಂತಹ ವೀರಮಾತೆಯರ ಆದರ್ಶಗಳನ್ನು ಮೈಗೂಡಿಸಿಕೊಂಡು ಮಹಿಳೆಯರು ಮುನ್ನಡೆಯಬೇಕಿದೆ ಎಂದರು.

ಹೆಣ್ಣುಮಕ್ಕಳು ಎಲ್ಲಾ ಕ್ಷೇತ್ರಗಳಲ್ಲಿಯೂ ಧೈರ್ಯದಿಂದ ಮುನ್ನಡೆಯಬೇಕು. ಮತ್ತು ಕಾನೂನುಗಳು ಹಾಗೂ ಸರ್ಕಾರದ ಸೌಲಭ್ಯಗಳನ್ನು ಸರಿಯಾಗಿ ಬಳಕೆ ಮಾಡಿಕೊಳ್ಳಬೇಕು. ಪ್ರತಿಯೊಬ್ಬ ಹೆಣ್ಣು ಮಗಳೂ ಸಹ ಧೈರ್ಯವನ್ನು ಮೈಗೂಡಿಸಿಕೊಂಡು ಸಮಾಜದಲ್ಲಿ ಮುಂಚೂಣಿಗೆ ಬರಬೇಕೆಂದರು.

ಈ ವೇಳೆ ರಾಯಚೂರು ತಹಶೀಲ್ದಾರ್ ಸುರೇಶ್ ವರ್ಮಾ ಅವರು ಮಾತನಾಡಿ, ದೇಶ ರಕ್ಷಣೆಗಾಗಿ ಒನಕೆಯನ್ನೇ ಶಸ್ತ್ರವನ್ನಾಗಿಸಿದ ಧೀರ ಮಾತೆ. ವಂಶ ಪರಂಪರೆ ರಾಜಕೀಯದಲ್ಲಿ ರಾಣಿ ಅರ್ಹತೆಯಿಂದ ತರಬೇತಿಯನ್ನು ಪಡೆದು, ವೀರಸೇನೆ ಹಾಗೂ ಎದುರಾಳಿಯ ಸೈನ್ಯವನ್ನು ಮೆಟ್ಟಿಸುವ ಇತಿಹಾಸವನ್ನು ನಾವು ಕಾಣುತ್ತೇವೆ. ಸಾಮಾನ್ಯ ಕುಟುಂಬದಲ್ಲಿ ಬಡತನದಲ್ಲಿರುವ ಮಾತೆ, ದೇಶಕ್ಕೆ ಅವಶ್ಯಕತೆ ಇದ್ದಾಗ ದೇಶದ ರಕ್ಷಣೆ ಮಾಡುತ್ತಾಳೆ ಎಂಬ ಸಂದೇಶವನ್ನು ಜಗತ್ತಿಗೆ ಸಾರಿದವರು ಒನಕೆ ಒಬವ್ವ ಎಂದು ಹೇಳಿದರು.

ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯದ ಕನ್ನಡ ಅಧ್ಯಯನ ವಿಭಾಗದ ಸಂಯೋಜಕರಾದ ಡಾ.ಶರಣಪ್ಪ ಚಲವಾದಿ ಮಾತನಾಡಿ, ಇಂದಿನ ಆಧುನಿಕ ಯುಗದಲ್ಲಿಯೂ ಮಹಿಳೆಯರು ತಮ್ಮ ಆತ್ಮಬಿಂಬ, ರಕ್ಷಣೆ ಹಾಗೂ ಧೈರ್ಯಕ್ಕಾಗಿ ಹೋರಾಡಬೇಕಾದ ಅನಿವಾರ್ಯತೆ ಇದೆ ಎಂದರು.

ಇದೇ ಸಂದರ್ಭದಲ್ಲಿ ರಾಯಚೂರು ಮಹಾನಗರ ಪಾಲಿಕೆಯ ಪರಿಸರ ವಿಭಾಗದ ಸಹಾಯಕ ಅಂಭಿಯತರರಾದ ಜೈಪಾಲ್ ರೆಡ್ಡಿ, ಸಮಾಜದ ಮುಖಂಡರಾದ ಮಲ್ಲೇಶ ಕೋಮಿನಿ, ಲಲಿತಾ ಅಂಜಿನೇಯ, ಜಗನ್ನಾಥ ಸುಂಕರಿ, ಅರ್ಚನಾ ಸುಂಕರಿ, ಸಂತೋಷ ನಂದಿನಿ, ಮಾರೆಪ್ಪ, ಎಂ.ವಸಂತ, ದಯಾನಂದ, ಶಿವರಾಜ್, ವಿಶ್ವನಾಥ ಪಟ್ಟಿ, ದೇವಿಂದ್ರ, ರಾಘವೇಂದ್ರ, ಭೀಮಣ್ಣ, ಗಿರಿಯಪ್ಪ ಸೇರಿದಂತೆ ಇತರರು ಉಪಸ್ಥಿತರಿದ್ದರು.

ನ.20ರಿಂದ ಆರ್.ಬಿ.ಶುಗರ್ಸ್ ಕಾರ್ಖಾನೆ ಕಾರ್ಯಾರಂಭ : ಎಸ್.ಆರ್.ಕುಂದರಗಿ

"ಸಾವಿರಾರು ಎಕರೆ ಕಬ್ಬು ಬೆಳೆಯಲು ರೈತರೊಂದಿಗೆ ಒಪ್ಪಂದ"



ಹುಣಸಗಿ: ರಾಯಚೂರು ಜಿಲ್ಲೆಯ ಲಿಂಗಸುಗೂರು ತಾಲೂಕಿನ ಸುಣಕಲ್ ಗ್ರಾಮದ ಹೊರವಲಯದಲ್ಲಿ ಸ್ಥಾಪನೆಯಾಗಿರುವ ಆರ್.ಬಿ. ಶುಗರ್ಸ್ ಲಿಮಿಟೆಡ್ ಸಕ್ಕರೆ ಕಾರ್ಖಾನೆ ನ.20ರಂದು ಕಾರ್ಯಾರಂಭ ಮಾಡಲಿದೆ ಎಂದು ಕಾರ್ಖಾನೆಯ ತಾಂತ್ರಿಕ ಉಪಾಧ್ಯಕ್ಷ ಎಸ್. ಆರ್.ಕುಂದರಗಿ ತಿಳಿಸಿದರು.

ಪಟ್ಟಣದ ಶ್ರೀ ನೀಲಕಂಠೇಶ್ವರ ಸೌಹಾರ್ದ ಪತ್ತಿನ ಸಹಕಾರಿ ಬ್ಯಾಂಕ್ ಸಭಾಂಗಣದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2026–27ನೇ ಸಾಲಿನ ಮೊದಲ ಹಂಗಾಮಿನಲ್ಲಿ ಪ್ರತಿದಿನ 5 ಸಾವಿರ ಮೆಟ್ರಿಕ್ ಟನ್ ಕಬ್ಬು ನುರಿಸುವ ಗುರಿ ಹೊಂದಲಾಗಿದೆ. ಹುಣಸಗಿ ತಾಲೂಕಿನಲ್ಲಿ 2 ಸಾವಿರ ಎಕರೆ, ಸುರಪುರ ಭಾಗದಲ್ಲಿ 3,500 ಎಕರೆ ಹಾಗೂ ಕೆಂಭಾವಿ ಭಾಗದಲ್ಲಿ 10 ಸಾವಿರ ಎಕರೆ ಪ್ರದೇಶದಲ್ಲಿ ಕಬ್ಬು ಬೆಳೆಯಲು ರೈತರು ಆಸಕ್ತಿ ತೋರಿದ್ದಾರೆ. ರೈತರ ಸಹಕಾರದೊಂದಿಗೆ ಕಬ್ಬು ಬೆಳೆಯುವ ಪ್ರದೇಶವನ್ನು ಹಂತ ಹಂತವಾಗಿ ವಿಸ್ತರಿಸಲಾಗುವುದು ಎಂದರು.

ವಿಜಯಪುರ, ರಾಯಚೂರು ಹಾಗೂ ಯಾದಗಿರಿ ಜಿಲ್ಲೆಗಳ ಗಡಿ ಪ್ರದೇಶ ಸೇರಿದಂತೆ ಒಟ್ಟು 40 ಸಾವಿರ ಎಕ–ರೆ ಪ್ರದೇಶದಲ್ಲಿ ಕಬ್ಬು ಬೆಳೆಯುವ ಗುರಿ ಹೊಂದಲಾಗಿದೆ. ಈಗಾಗಲೇ 7 ಸಾವಿರ ಎಕರೆ ಪ್ರದೇಶದಲ್ಲಿ ಕಬ್ಬು ಬೆಳೆಯಲು ರೈತರೊಂದಿಗೆ ಒಪ್ಪಂದ ಮಾಡಿಕೊಳ್ಳಲಾಗಿದೆ. ಅಲ್ಲದೆ, 1 ಸಾವಿರ ಎಕರೆ ಪ್ರದೇಶಕ್ಕೆ ಕಬ್ಬಿನ ಬೀಜ ವಿತರಿಸಲಾಗಿದೆ ಎಂದು ತಿಳಿಸಿದರು. ರೈತರಿಗೆ ಹೊರೆಯಾಗದಂತೆ ಕಬ್ಬು ಸಾಗಣೆ ವೆಚ್ಚವನ್ನು ಕಾರ್ಖಾನೆಯೇ ಭರಿಸಲಿದೆ. ಸರ್ಕಾರ ನಿಗದಿಪಡಿಸಿದ ದರದಲ್ಲಿಯೇ ಸಬ್ಸಿಡಿ ಸಮೇತ ಕಬ್ಬು ಖರೀದಿಸಲಾಗುವುದು. ಕಬ್ಬು ಪೂರೈಸಿದ 15 ದಿನಗಳೊಳಗೆ ರೈತರ ಬ್ಯಾಂಕ್ ಖಾತೆಗೆ ಹಣ ಜಮಾ ಮಾಡುವ ಉದ್ದೇಶ ಹೊಂದಲಾಗಿದೆ ಎಂದು ಭರವಸೆ ನೀಡಿದರು.

ಕಾರ್ಖಾನೆಯಿಂದ ಸ್ಥಳೀಯ ಭಾಗದಲ್ಲಿ ಉದ್ಯೋಗಾವಕಾಶಗಳು ಸೃಷ್ಟಿಯಾಗಲಿವೆ. ಐಟಿಐ ಹಾಗೂ ಪಿಯುಸಿ ವಿದ್ಯಾರ್ಹತೆ ಹೊಂದಿರುವ ಯುವಕರಿಗೆ ಅಗತ್ಯ ತರಬೇತಿ ನೀಡಲಾಗುವುದು. ಪ್ರಸ್ತುತ ಸುಮಾರು 100 ಕಾರ್ಮಿಕರ ಅವಶ್ಯಕತೆಯಿದ್ದು, ಮುಂದಿನ ದಿನಗಳಲ್ಲಿ ಉದ್ಯೋಗಾವಕಾಶಗಳು ಮತ್ತಷ್ಟು ಹೆಚ್ಚಾಗಲಿವೆ. ಹಿಂದುಳಿದ ಪ್ರದೇಶದಲ್ಲಿ ಕಾರ್ಖಾನೆ ಸ್ಥಾಪನೆಯಾಗಿರುವುದು ಸ್ಥಳೀಯ ಆರ್ಥಿಕ ಮತ್ತು ಸಾಮಾಜಿಕ ಅಭಿವೃದ್ಧಿಗೆ ಸಹಕಾರಿಯಾಗಲಿದೆ ಎಂದು ಅಭಿಪ್ರಾಯಪಟ್ಟರು. ಈ ಸಂದರ್ಭದಲ್ಲಿ ಸ್ಥಳೀಯ ಮುಖಂಡರಾದ ಸಂಗಣ್ಣ ಸಾಹುಕಾರ ವೈಲಿ, ಪ್ರಕಾಶ್ ಅಂಗಡಿ ಹಾಗೂ ಕಾರ್ಖಾನೆಯ ಕಬ್ಬು ಅಭಿವೃದ್ಧಿ ಮತ್ತು ಖರೀದಿ ವಿಭಾಗದ ಉಪ ಪ್ರಧಾನ ವ್ಯವಸ್ಥಾಪಕ ಬಿ.ಬಿ.ಪಾಟೀಲ್ ಉಪಸ್ಥಿತರಿದ್ದರು.

ಸಮಯಕ್ಕೆ ಸರಿಯಾಗಿ ಬಸ್ ಸೌಲಭ್ಯಕ್ಕೆ ಆಗ್ರಹಿಸಿ ವಿದ್ಯಾರ್ಥಿಗಳಿಂದ ಬಸ್ ತಡೆದು ಪ್ರತಿಭಟನೆ



ಕಂಪ್ಲಿ: ಶಾಲಾ–ಕಾಲೇಜುಗಳ ಸಮಯಕ್ಕೆ ಸರಿಯಾಗಿ ಬಸ್ ಸೌಲಭ್ಯ ಕಲ್ಪಿಸಬೇಕು ಹಾಗೂ ನಿಲುಗಡೆ ನೀಡದೆ ತೆರಳುವ ಚಾಲಕರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ವಿದ್ಯಾರ್ಥಿಗಳು ತಾಲ್ಲೂಕಿನ ನೆಲ್ಲುಡಿ ಕೊಟ್ಟಾಲ್ ಬಳಿಯ ಕುರುಗೋಡು–ಕಂಪ್ಲಿ ಮುಖ್ಯರಸ್ತೆಯಲ್ಲಿ ಗುರುವಾರ ಕೆಎಸ್ಆರ್‌ಟಿಸಿ ಬಸ್ ತಡೆದು ಪ್ರತಿಭಟನೆ ನಡೆಸಿದರು.

ಸಣಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನಂ. 2 ಮುದ್ದಾಪುರ ಗ್ರಾಮಕ್ಕೆ ದಿನ ಬಿಟ್ಟು ದಿನ ಬಸ್ ಸಂಚರಿಸುತ್ತಿರುವುದರಿಂದ ನಿತ್ಯ 60ಕ್ಕೂ ಹೆಚ್ಚು ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ತೀವ್ರ ತೊಂದರೆ–ಯಾಗುತ್ತಿದೆ. ಬಸ್ ಬಾರದ ದಿನಗಳಲ್ಲಿ ವಿದ್ಯಾರ್ಥಿಗಳು ಮುದ್ದಾಪುರದಿಂದ ದೂರದ ನೆಲ್ಲುಡಿ ಕ್ರಾಸ್‌ವರೆಗೆ ನಡೆದುಕೊಂಡು ಬರಬೇಕಾದ ಅನಿವಾರ್ಯತೆ ಎದುರಾಗಿದೆ.

ಶಂಕರ್‌ಸಿಂಗ್ ಕ್ಯಾಂಪ್ ರಸ್ತೆಯ ಬಸ್ ನಿಲ್ದಾಣದಲ್ಲಿ ಗಂಟೆಗಟ್ಟಲೆ ಕಾದರೂ ಬಸ್‌ಗಳು ಬರುವುದಿಲ್ಲ. ಅಪರೂಪಕ್ಕೆ ಬಸ್ ಬಂದರೂ, ಶಕ್ತಿ ಯೋಜನೆಯಡಿ ಪ್ರಯಾಣಿಸುವ ಮಹಿಳೆಯರಿಂದ ಬಸ್ ಭರ್ತಿಯಾಗಿದೆ ಎಂಬ ಕಾರಣ ನೀಡಿ ಚಾಲಕರು ನಿಲುಗಡೆ ನೀಡದೆ ಮುಂದೆ ಸಾಗುತ್ತಾರೆ. ಇದರಿಂದ ಕಂಪ್ಲಿ, ಕುರುಗು–ೋಡು, ಬಳ್ಳಾರಿ, ಹೊಸಪೇಟೆ ಹಾಗೂ ಗಂಗಾವತಿಯ ಕಾಲೇಜುಗಳಿಗೆ ತೆರಳುವ ನೂರಾರು ವಿದ್ಯಾರ್ಥಿಗಳು ತರಗತಿಗಳಿಗೆ ಹಾಜರಾಗಲು ಸಾಧ್ಯವಾಗುತ್ತಿಲ್ಲ. ಸಂಜೆ ವೇಳೆಯೂ ಸಕಾಲಕ್ಕೆ ಬಸ್ ಸಿಗದೆ ರಾತ್ರಿ ತಡವಾಗಿ ಮನೆಗೆ ತಲುಪುವಂತಾಗಿದೆ ಎಂದು ಪ್ರತಿಭಟನಾನಿರತ ವಿದ್ಯಾರ್ಥಿಗಳು ದೂರಿದರು.

ಸ್ಥಳಕ್ಕೆ ಧಾವಿಸಿದ ಪೊಲೀಸರು ವಿದ್ಯಾರ್ಥಿಗಳ ಮನವೊಲಿಸಿ, ಸಾರಿಗೆ ಸಂಸ್ಥೆಯ ಅಧಿಕಾರಿಗಳೊಂದಿಗೆ ಚರ್ಚಿಸಿ ಸಮಸ್ಯೆ ಬಗೆಹರಿಸುವ ಭರವಸೆ ನೀಡಿ–ದರು. ಬಳಿಕ ವಿದ್ಯಾರ್ಥಿಗಳು ಪ್ರತಿಭಟನೆಯನ್ನು ಹಿಂಪಡೆದರು.

ಬಿ. ಶಿವಾನಂದ, ಬಿ. ಸುಧೀರ್, ವಿಜಯಕುಮಾರ,

ಎಸ್‌ಡಿಎಂಸಿ ಅಧ್ಯಕ್ಷರಾಗಿ ಮಲ್ಲಿಕಾರ್ಜುನ ದೊಡ್ಮನಿ, ಉಪಾಧ್ಯಕ್ಷರಾಗಿ ರೇಖಾ ಗುಂದಗಿ ಆಯ್ಕೆ



ಅಫಜಲಪುರ: ತಾಲೂಕಿನ ಶಿವಪುರ ಗ್ರಾಮದ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಗೆ ನೂತನ ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ (ಎಸ್‌ಡಿಎಂಸಿ) ರಚಿಸಲಾಗಿದ್ದು, ನೂತನ ಅಧ್ಯಕ್ಷರಾಗಿ ಮಲ್ಲಿಕಾರ್ಜುನ ದೊಡ್ಮನಿ ಹಾಗೂ ಉಪಾಧ್ಯಕ್ಷರಾಗಿ ರೇಖಾ ಗುಂದಗಿ ಆಯ್ಕೆಯಾಗಿದ್ದಾರೆ.

ಚುನಾವಣಾಧಿಕಾರಿ ಹಾಗೂ ಸಿಆರ್‌ಪಿ ಸಿದ್ದು ಬಿರಾದಾರ ಅವರ ನೇತೃತ್ವದಲ್ಲಿ ನಡೆದ ಆಯ್ಕೆ ಪ್ರಕ್ರಿಯೆಯಲ್ಲಿ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು.

ನೂತನ ಅಧ್ಯಕ್ಷ ಮಲ್ಲಿಕಾರ್ಜುನ ದೊಡ್ಮನಿ ಮಾತನಾಡಿ, ಶಾಲೆಯ ಸಮಗ್ರ ಅಭಿವೃದ್ಧಿಗೆ ಆದ್ಯತೆ ನೀಡಲಾಗುವುದು. ಮಕ್ಕಳ ಶೈಕ್ಷಣಿಕ ಗುಣಮಟ್ಟವನ್ನು ಹೆಚ್ಚಿಸಲು, ಶಾಲೆಗೆ ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸಲು ಹಾಗೂ ಸರ್ಕಾರದಿಂದ ದೊರೆಯುವ ಅನುದಾನವನ್ನು ಸಮರ್ಪಕವಾಗಿ ಸದ್ಬಳಕೆ ಮಾಡುವ ನಿಟ್ಟಿನಲ್ಲಿ ಎಸ್‌ಡಿಎಂಸಿ ಸದಸ್ಯರೊಂದಿಗೆ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಲಾಗುವುದು ಎಂದು ತಿಳಿಸಿದರು.

ಇದೆ ಸಂದರ್ಭದಲ್ಲಿ ಮಾಜಿ ಎಸ್.ಡಿ.ಎಮ್.ಸಿ ಅಧ್ಯಕ್ಷ ಯಲ್ಲಪ್ಪ ಹಾಗೂ ರಾಜು ಜಮಾದಾರ, ಶ್ರೀಶೈಲ ಜಮಾದಾರ ಮಾತನಾಡಿದರು.

ಈ ಸಂದರ್ಭದಲ್ಲಿ ಶಾಲೆಯ ಮುಖ್ಯ ಶಿಕ್ಷಕಿ ಕಲಾವತಿ ಮುಜಗೊಂಡ, ಸುಜಾತ ಗುರುಬಸಯ್ಯ, ಶಂಕರಗೌಡ ಗುರಣ್ಣಗೌಡ, ಲಕ್ಷ್ಮಿ ರಾಜಕುಮಾರ, ಶ್ರೀಶೈಲ ಚಂದ್ರಮ್, ಭೀಮಬಾಯಿ ಮಲ್ಲಪ್ಪ, ಶಿವಪ್ಪ ಶ್ರೀಮಂತ, ಮಂಜುನಾಥ ದುಂಡಪ್ಪ, ಸಿದ್ದಮ್ಮ ರವಿ, ಶಾಂತಪ್ಪ ಶಿವಪ್ಪ, ಪಾರ್ವತಿ ಪರಮೇಶ್ವರ, ಶಾಂತಪ್ಪ ಲಕ್ಕಪ್ಪ, ಲಕ್ಷ್ಮಿ ಅಶೋಕ, ರಾಜಕುಮಾರ ಹಣಮಂತ, ಲಕ್ಕಮ್ಮ ಜಮಾದಾರ, ಗುರುಪಾದಗೌಡ ಪಾಟೀಲ್, ಶಿವಪ್ಪ ನಗದಿ, ಸಿದ್ದಣಗೌಡ ಪಾಟೀಲ್, ಕಲ್ಲಪ್ಪ ವಾಲಿಕಾರ, ಚಂದು ಬನ್ನೇಟಿ, ಶಿವಪುತ್ರ ವಾಲಿಕಾರ, ಮಹೇಶ ವಾಲಿಕಾರ, ಮಲಕಪ್ಪ ಪಿರಪ್ಪ, ಗುಂಡಯ್ಯ ರಾಚಯ್ಯ ಸೇರಿದಂತೆ ಗ್ರಾಮಸ್ಥರು ಹಾಗೂ ಪಾಲಕರು ಉಪಸ್ಥಿತರಿದ್ದರು.

ರೈತ ಸಂಪರ್ಕ ಕೇಂದ್ರದಲ್ಲಿ ಉಚಿತ ಬಿತ್ತನೆ ಬೀಜ ವಿತರಣೆ



ಕಂಪ್ಲಿ: ಪಟ್ಟಣದ ರೈತ ಸಂಪರ್ಕ ಕೇಂದ್ರದಲ್ಲಿ ಕೃಷಿ ಇಲಾಖೆಯ ವತಿಯಿಂದ ಅರ್ಹ ರೈತರಿಗೆ ಉಚಿತವಾಗಿ ಬಿತ್ತನೆ ಬೀಜಗಳನ್ನು ವಿತರಿಸಲಾಯಿತು. ಫಲಾನುಭವಿ ರೈತರಿಗೆ ತಲಾ 16 ಕೆ.ಜಿ. ಶೇಂಗಾ (ಕಡಲೆಕಾಯಿ) ಬೀಜ, ಜೋಳದ ಬಿತ್ತನೆ ಬೀಜ ಹಾಗೂ ಬೀಜೋಪಚಾರ ಔಷಧಗಳನ್ನು ನೀಡಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಸಹಾಯಕ ಕೃಷಿ ನಿರ್ದೇಶಕ ಮಂಜುನಾಥ್ ರೆಡ್ಡಿ, ಕೃಷಿ ಇಲಾಖೆಯಿಂದ ವಿತರಿಸಲಾಗುವ ಗುಣಮಟ್ಟದ ಬಿತ್ತನೆ ಬೀಜಗಳನ್ನು ರೈತರು ಸದುಪಯೋಗಪಡಿಸಿಕೊಳ್ಳಬೇಕು. ಸಕಾಲದಲ್ಲಿ ವೈಜ್ಞಾನಿಕ ಪದ್ಧತಿಯಲ್ಲಿ ಬಿತ್ತನೆ ಮಾಡುವ ಮೂಲಕ ಉತ್ತಮ ಇಳುವರಿ ಪಡೆಯಬೇಕು ಎಂದು ಸಲಹೆ ನೀಡಿದರು.

ತಾಲ್ಲೂಕು ಪ್ರಭಾರಿ ಕೃಷಿ ಅಧಿಕಾರಿ ಟಿ. ಜ್ಯೋತಿ, ತಾಂತ್ರಿಕ ವ್ಯವಸ್ಥಾಪಕರಾದ ಶಿವಾಜಿ ರಾಥೋಡ್, ನಾಗರಾಜ್ ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು. ರೈತರಾದ ಹೊನ್ನೂರಪ್ಪ, ತಿಪ್ಪೇಸ್ವಾಮಿ, ತಿಪ್ಪಮ್ಮ, ವೆಂಕೋಬ, ದೇವರಾಜ, ರಘು, ಜಡೆಪ್ಪ, ಹುಲಿಗೆಮ್ಮ ಸೇರಿದಂತೆ ಹಲವರು ಬಿತ್ತನೆ ಬೀಜಗಳನ್ನು ಪಡೆದುಕೊಂಡರು.

ವಾಲ್ಮೀಕಿ ನಿಗಮ ಹಗರಣ: ಪೂರಕ ದೋಷಾರೋಪ ಪಟ್ಟಿ ಸಲ್ಲಿಸಿದ ED; 6 ಆರೋಪಿಗಳಿಗೆ ಕೋರ್ಟ್ ಸಮನ್ಸ್..!

ಬೆಂಗಳೂರು: ಬಹುಚರ್ಚಿತ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಬಹುಕೋಟಿ ಹಗರಣದ ತನಿಖೆಯನ್ನು ಜಾರಿ ನಿರ್ದೇಶನಾಲಯ ಮತ್ತಷ್ಟು ಚುರುಕುಗೊಳಿಸಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಇ.ಡಿ ಸಲ್ಲಿಸಿರುವ ಪೂರಕ ದೋಷಾರೋಪ ಪಟ್ಟಿಯನ್ನು ಪರಿಗಣಿಸಿರುವ ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯವು, ಪ್ರಕರಣದ ಆರು ಮಂದಿ ಹೊಸ ಆರೋಪಿಗಳಿಗೆ ಸಮನ್ಸ್ ಜಾರಿಗೊಳಿಸಿ ಮಹತ್ವದ ಆದೇಶ ಹೊರಡಿಸಿದೆ. ಇ.ಡಿ ಸಲ್ಲಿಸಿರುವ ಪೂರಕ ಚಾರ್ಜ್‌ಶೀಟ್‌ನಲ್ಲಿ ಪಿತ್ತಲ ಶ್ರೀನಿವಾಸ, ಗಾಮಿನಿ ಚಿನ್ನ ರಾಜು, ವೆಲ್ಮ ಸುರೇಶ್, ಜಿ. ಜಗದೀಶ್, ಪ್ಯಾರಾಟೋಪಿಯಾ ಇ–ಕಾಮರ್ಸ್ ಪ್ರೈವೇಟ್ ಲಿಮಿಟೆಡ್ ಸಂಸ್ಥೆಯ ಪ್ರತಿನಿಧಿ ಮುಕುಂಗಾ ಮೊಶಿಲ್ಲುಂಗ್ ಮೇರಿಂಗ್ ಹಾಗೂ ಮುಕುಂಗಾ ಮೊಶಿಲ್ಲುಂಗ್ ಮೇರಿಂಗ್ ಅವರನ್ನು ಕ್ರಮವಾಗಿ 26ರಿಂದ 31ನೇ ಆರೋಪಿಗಳನ್ನಾಗಿ ಹೆಸರಿಸಲಾಗಿದೆ.

ಡಿ.15ರವರೆಗೆ ಎಲ್‌ಎಲ್‌ಸಿ ಕಾಲುವೆಗೆ ನೀರು ಹರಿಸಲು ಆಗ್ರಹ: ಇಂದಿನಿಂದ ರೈತರ ಪಾದಯಾತ್ರೆ



ಕಂಪ್ಲಿ: ತುಂಗಭದ್ರಾ ಬಲದಂಡೆ ಕೆಳಮಟ್ಟದ ಕಾಲುವೆಗೆ (ಎಲ್‌ಎಲ್‌ಸಿ) ಡಿ.15ರವರೆಗೆ ನೀರು ಹರಿಸದಿದ್ದರೆ ಈ ಭಾಗದ ಸಾವಿರಾರು ಕೋಟಿ ರೂಪಾಯಿ ಮೌಲ್ಯದ ಬೆಳೆ ಸಂಪೂರ್ಣ ನಾಶವಾಗಲಿದ್ದು, ರೈತ ಕುಟುಂಬಗಳು ಬೀದಿಗೆ ಬೀಳಲಿವೆ. ಬೆಳೆ ಉಳಿಸಿಕೊಳ್ಳುವ ಉದ್ದೇಶದಿಂದ ನ.14ರಿಂದ 'ರೈತರ ನಡೆ ತುಂಗಭದ್ರಾ ಡ್ಯಾಂ ಕಡೆ' ಎಂಬ ಬೃಹತ್ ಪಾದಯಾತ್ರೆ ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ರಾಜ್ಯ ಕಾರ್ಯಾಧ್ಯಕ್ಷ ಬಿ.ವಿ. ಗೌಡ ತಿಳಿಸಿದರು.

ಪಟ್ಟಣದಲ್ಲಿ ಗುರುವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಜಲಾಶಯದಲ್ಲಿ ಹೊಸ ಗೇಟ್ ಅಳವಡಿಸುವ ಕಾರಣದಿಂದ ಕಳೆದ ಬಾರಿ ಜಲಾಶಯದಲ್ಲಿ ನೀರಿದ್ದರೂ ಬೇಸಿಗೆ ಬೆಳೆಯನ್ನು ಸಂಪೂರ್ಣವಾಗಿ ಕಳೆದುಕೊಂಡಿದ್ದೆವು. ಈ ಬಾರಿ ಹೆಚ್ಚಿನ ಖರ್ಚು ಮಾಡಿ ಭತ್ತ ಮತ್ತು ಜೋಳ ಬೆಳೆದಿದ್ದು, ಬೆಳೆಗಳು ಈಗಷ್ಟೇ ಕಾಳು ಕಟ್ಟುವ ಹಾಗೂ ತೆನೆ ಬಿಡುವ ಹಂತದಲ್ಲಿವೆ. ಆದರೆ, ಸರ್ಕಾರ ನವೆಂಬರ್ 20ರವರೆಗೆ ಮಾತ್ರ ನೀರು ಹರಿಸುವುದಾಗಿ ಹೇಳಿರುವುದು ರೈತರನ್ನು ತೀವ್ರ ಸಂಕಷ್ಟಕ್ಕೆ ದೂಡಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ನ.14ರಂದು ಬೆಳಿಗ್ಗೆ ಪಟ್ಟಣದ ಉದ್ಭವ ಗಣಪತಿ ದೇವಸ್ಥಾನದಿಂದ ಪಾದಯಾತ್ರೆ ಆರಂಭವಾಗಲಿದ್ದು, ನ. 16ರಂದು ಮುನಿರಾಬಾದ್‌ನಲ್ಲಿರುವ ನೀರಾವರಿ ಕೇಂದ್ರ ಕಚೇರಿಗೆ ಮುತ್ತಿಗೆ ಹಾಕಲಾಗುವುದು.

ಸರ್ಕಾರ ತಕ್ಷಣವೇ ಆಂಧ್ರಪ್ರದೇಶ ಮತ್ತು ತೆಲಂಗಾಣ ಸರ್ಕಾರಗಳೊಂದಿಗೆ ಮಾತುಕತೆ ನಡೆಸಿ, ಅವುಗಳ ಪಾಲಿನ ನೀರನ್ನು ಪಡೆಯಬೇಕು. ಜೊತೆಗ